# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 65 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಚಿತ್ರದುರ್ಗ | ದಿನಾಂಕ: 24–09–2024 ಮಂಗಳವಾರ | ಪುಟ: 4 | ಬೆಲೆ : ರೂ.2–00
Volume - 02 Issue - 65 | RNI No: KARKAN/2023/88462 | Chitradurga | Date: 24-09-2024 Tuesday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಕಾರ್ಮಿಕರ ಶ್ರಮದಿಂದ ಸಮಾಜ ಸುವ್ಯವಸ್ಥಿತ; ನ್ಯಾ.ಮಹಾವೀರ್ ಕರೆಣ್ಣವರ್ 2

ಉಪ್ಪಾರ ಸಮುದಾಯ ಭವನ ನಿರ್ಮಾಣ ಮಾಡುವೆ: ಶಾಸಕ ಬಿ.ಜಿ. ಗೋವಿಂದಪ್ಪ 3

ಪ್ರಧಾನಮಂತ್ರಿ ಜನಜಾತಿಯ ಉನ್ನತ ಗ್ರಾಮ ಅಭಿಯಾನಕ್ಕೆ ಜಿಲ್ಲೆಯ 87 ಗ್ರಾಮ ಆಯ್ಕೆ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಕೈಮಗ್ಗ, ವಿದ್ಯುತ್ ಮಗ್ಗ ನೇಕಾರರಿಂದ ಅರ್ಜಿ

» ಚಿತ್ರದುರ್ಗ

ಕೈಮಗ್ಗ ಮತ್ತು ಜವಳಿ ಇಲಾಖೆಯು ಕೈಮಗ್ಗ ಮತ್ತು ವಿದ್ಯುತ್ ಮಗ್ಗ ನೇಕಾರರುಗಳಿಗೆ ಹಾಗೂ ಕೈಮಗ್ಗ ನೇಕಾರರಿಗೆ ಸಂಬಂಧಿಸಿದ ಇತರೆ ಚಟುವಟಿಕೆಗಳಲ್ಲಿ ತೊಡಗಿರುವ ನೇಕಾರರಿಗೆ ವಾರ್ಷಿಕ ರೂ.5000/– ಗಳನ್ನು ನೀಡಲು ನೇಕಾರರ ಸಮ್ಮಾನ್ ಯೋಜನೆಯಡಿ 2024–25ನೇ ಸಾಲಿಗೆ ಈಗಾಗಲೇ ನೊಂದಾಯಿತವಾಗಿರುವ ಅರ್ಹ ಕೈಮಗ್ಗ, ವಿದ್ಯುತ್ ಮಗ್ಗ ನೇಕಾರರಿಂದ ಹೊಸದಾಗಿ ಅರ್ಜಿ ಪಡೆದು ಅರ್ಹವಿರುವ ನೇಕಾರರ ಅರ್ಜಿಗಳನ್ನು ಸೇವಾ ಸಿಂಧು ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡಲು ಕೇಂದ್ರ ಕಚೇರಿ ಪತ್ರದಲ್ಲಿ ಸೂಚಿಸಲಾಗಿದೆ.ಅದರಂತೆ 2023–24ನೇ ಸಾಲಿನಲ್ಲಿ ಈ ಯೋಜನೆಯಡಿ ಈಗಾಗಲೇ ಸೌಲಭ್ಯ ಪಡೆದಿರುವ ಕೈಮಗ್ಗ ಮತ್ತು ವಿದ್ಯುತ್ ಮಗ್ಗ ನೇಕಾರರ ಪಟ್ಟಿಯಲ್ಲಿ ನೊಂದಾಯಿತ ಕೈಮಗ್ಗ ನೇಯ್ಗೆ, ವಿದ್ಯುತ್ ಮಗ್ಗ ನೇಯ್ಗೆ ಚಟುವಟಿಕೆಯಲ್ಲಿ ತೊಡಗಿರುವ ಅರ್ಹ ನೇಕಾರರಿಂದ, ಸ್ಥಳೀಯ ಕೈಮಗ್ಗ ಅಭಿವೃದ್ಧಿ ನಿಗಮ, ನೇಕಾರ ಸಹಕಾರ ಸಂಘಗಳ ಮೂಲಕ ಅರ್ಜಿ ಪಡೆಯಲಾಗುತ್ತಿದೆ.

ನಿಗದಿತ ನಮೂನೆಯಲ್ಲಿ ಅರ್ಜಿಯನ್ನು ಆಧಾರ್ ಕಾರ್ಡ್ ಮತ್ತು ರೇಷನ್ ಕಾರ್ಡ್‌ನೊಂದಿಗೆ ನಿಗಮ, ನೇಕಾರ ಸಹಕಾರ ಸಂಘ, ಸಂಸ್ಥೆಗಳ ಮೂಲಕ ಅಥವಾ ನೇರವಾಗಿ ಅಕ್ಟೋಬರ್ 20ರೊಳಗಾಗಿ ಉಪನಿರ್ದೇಶಕರ ಕಚೇರಿ, ಕೈಮಗ್ಗ ಮತ್ತು ಜವಳಿ ಇಲಾಖೆ, ಬಿ.ಡಿ.ರಸ್ತೆ, ಯುನಿಯನ್ ಪಾರ್ಕ್ ಹತ್ತಿರ, ಮಸೀದಿ ಪಕ್ಕ, ಚಿತ್ರದುರ್ಗ ಕಚೇರಿಗೆ ಸಲ್ಲಿಸಬೇಕು ಎಂದು ಕೈಮಗ್ಗ ಮತ್ತು ಜವಳಿ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಆಡಳಿತ ನ್ಯಾಯಾಧೀಕರಣ ತರಬೇತಿ: ಪರಿಶಿಷ್ಟ ಜಾತಿಯ ಕಾನೂನು ಪದವೀಧರರಿಂದ ಅರ್ಜಿ

» ಚಿತ್ರದುರ್ಗ

2024–25 ನೇ ಸಾಲಿಗೆ ಆಡಳಿತ ನ್ಯಾಯಾಧೀಕರಣದಲ್ಲಿ ತರಬೇತಿ ನೀಡಲು ಪರಿಶಿಷ್ಟ ಜಾತಿಯ ಕಾನೂನು ಪದವೀಧರರನ್ನು ಆಯ್ಕೆ ಮಾಡಲು, ಪರಿಶಿಷ್ಟ ಜಾತಿಯ ಅರ್ಹ ಕಾನೂನು ಪದವೀಧರರಿಂದ ಅರ್ಜಿ ಆಹ್ವಾನಿಸಲಾಗಿದೆ ಸಂಬಂಧಪಟ್ಟ ಕಾನೂನು ಪದವೀಧರರು ಅರ್ಜಿಯನ್ನು ಇಲಾಖಾ ವೆಬ್‌ಸೈಟ್ www.sw.kar.nic.in ನಲ್ಲಿ ಈಗಾಗಲೇ ಅರ್ಜಿ ಸಲ್ಲಿಕೆ ಪ್ರಕ್ರಿಯೆ ಇದೇ ಸೆಪ್ಟೆಂಬರ್ 20 ರಿಂದ ಪ್ರಾರಂಭವಾಗಿದ್ದು, ಸೆ.30 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ.ಷರತ್ತುಗಳು: ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಅರ್ಜಿ ಸಲ್ಲಿಕೆಯ ದಿನಾಂಕಕ್ಕೆ ಕಾನೂನು ಪದವಿಯನ್ನು ಪಡೆದು 2 ವರ್ಷ ಮೀರಿರಬಾರದು. ಅರ್ಜಿ ಸಲ್ಲಿಕೆಯ ಕೊನೆಯ ದಿನಾಂಕಕ್ಕೆ ಅಭ್ಯರ್ಥಿಯ ವಯಸ್ಸು 40 ವರ್ಷ ಮೀರಿರಬಾರದು. ತರಬೇತಿಯನ್ನು ಜಿಲ್ಲೆಯಲ್ಲಿಯೇ ಪಡೆದಿರಬೇಕು. ತರಬೇತಿಗೆ ಆಯ್ಕೆ ಮಾಡಲಾದ ಅಭ್ಯರ್ಥಿಗಳಿಗೆ ತರಬೇತಿ ಅವಧಿಯಲ್ಲಿ ರೂ.10,000 ಶಿಷ್ಯ ವೇತನ ನೀಡಲಾಗುವುದು. ಆಯ್ಕೆಯಾದ ಅಭ್ಯರ್ಥಿಗಳು ಜಿಲ್ಲಾ ಪಬ್ಲಿಕ್ ಪ್ರಾಸಿಕ್ಯೂಟರ್, ಸರ್ಕಾರಿ ವಕೀಲರು ಅಥವಾ 20 ವರ್ಷಗಳ ಕಾಲ ಕಡಿಮೆ ಇಲ್ಲದ ವಕೀಲ ವೃತ್ತಿಯಲ್ಲಿ ಸೇವೆ ಸಲ್ಲಿಸುತ್ತಿರುವ ನ್ಯಾಯವಾದಿಗಳ ಬಳಿ ತರಬೇತಿ ಪಡೆಯುತ್ತಿದ್ದೀರಿ ಎಂದು ಲಿಖಿತ ರೂಪದಲ್ಲಿ ತಿಳಿಸಿರಬೇಕು. ತರಬೇತಿ ಅವಧಿಯು 2 ವರ್ಷವಿದ್ದು ಮದ್ಯದಲ್ಲಿ ಬಿಡುವುದಿಲ್ಲ ಎಂದು ಅಥವಾ ಒಂದು ವೇಳೆ ಬಿಟ್ಟರೆ ತರಬೇತಿ ಅವಧಿಯಲ್ಲಿ ಪಡೆದ ಶಿಷ್ಯ ವೇತನವನ್ನು ಶೇ.10 ರಷ್ಟು ಬಡ್ಡಿಯೊಂದಿಗೆ ಸರ್ಕಾರಕ್ಕೆ ಮರುಪಾವತಿ ಮಾಡುವುದಾಗಿ ಮುಚ್ಚಳಿಕೆ ಬರೆದು ಕೊಡಬೇಕು. ಈ ನಿಯಮ ರಾಜ್ಯ ಮತ್ತು ಕೇಂದ್ರ ಸರ್ಕಾರದಲ್ಲಿ ಕೆಲಸ ಮಾಡುತ್ತಿದ್ದರೆ ಅನ್ವಯಿಸುವುದಿಲ್ಲ. ಆಯ್ಕೆಯಾದ ಅಭ್ಯರ್ಥಿಗಳು ಸುಳ್ಳು ಮಾಹಿತಿ ಸುಳ್ಳು ದಾಖಲೆಗಳನ್ನು ನೀಡಿ ಆಯ್ಕೆಯಾಗಿ ಶಿಷ್ಯ ವೇತನ ಪಡೆದರೆ, ಅಂತಹ ಅಭ್ಯರ್ಥಿಗಳು ತರಬೇತಿ ಅವಧಿಯಲ್ಲಿ ಪಡೆದ ಶಿಷ್ಯ ವೇತನವನ್ನು ಒಟ್ಟಿಗೆ ಶೇ.10 ರ ಬಡ್ಡಿಯೊಂದಿಗೆ ಸರ್ಕಾರಕ್ಕೆ ಹಿಂದಿರುಗಿಸಬೇಕು. ತಪ್ಪಿದರೆ ಭೂ ಕಂದಾಯ ಬಾಕಿ ವಸೂಲಿಯಂತೆ ವಸೂಲಿ ಮಾಡಲಾಗುತ್ತದೆ. ಸಂದರ್ಶನ ನಡೆಯುವ ಸ್ಥಳ ಮತ್ತು ದಿನಾಂಕವನ್ನು ಅಂಚೆಯ ಮೂಲಕ ತಿಳಿಸಲಾಗುತ್ತದೆ. ಆಯ್ಕೆಯನ್ನು ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಪರಿಶೀಲಿಸಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕರ ಕಚೇರಿ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

# ರಾಜ್ಯದಲ್ಲಿ ಬಿಜೆಪಿ ಅಧಿಕಾರಕ್ಕೆ ತರುವತನಕ ಮನೆಯಲ್ಲಿ ಕೂರಲ್ಲ: ರಾಜ್ಯಾಧ್ಯಕ್ಷ ಬಿವೈವಿ

» ಚಿತ್ರದುರ್ಗ

ರಾಜ್ಯದಲ್ಲಿ ಬಿಜೆಪಿ.ಯನ್ನು ಸ್ಪಷ್ಟ ಬಹುಮತದೊಂದಿಗೆ ಅಧಿಕಾರಕ್ಕೆ ತರುವತನಕ ಮನೆಯಲ್ಲಿ ಕೂರುವುದಿಲ್ಲವೆಂದು ಪಕ್ಷದ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಸಂಕಲ್ಪ ತೊಟ್ಟರು.




ಮಾಳಪ್ಪನಹಟ್ಟಿ ಸಮೀಪವಿರುವ ತಿರುಮಲ ಕಲ್ಯಾಣ ಮಂಟಪದಲ್ಲಿ ಭಾರತೀಯ ಜನತಾಪಾರ್ಟಿ ಚಿತ್ರದುರ್ಗ ಜಿಲ್ಲೆ ವತಿಯಿಂದ ಸೋಮವಾರ ಹಮ್ಮಿಕೊಳ್ಳಲಾಗಿದ್ದ ಸದಸ್ಯತ್ವಾ ಅಭಿಯಾನ ಉದ್ಘಾಟಿಸಿ ಮಾತನಾಡಿದರು.

ದೇಶದ ಪ್ರಧಾನಿ ನರೇಂದ್ರಮೋದಿ ಕಳೆದ 2 ರಂದು ಸದಸ್ಯತ್ವಾ ಅಭಿಯಾನಕ್ಕೆ ಚಾಲನೆ ನೀಡಿದ್ದಾರೆ. ಪ್ರತಿ ಬೂತ್‌ನಲ್ಲಿ ಐದಾರು ಜನರ ತಂಡ ಮಾಡಿಕೊಂಡು ಮನೆ ಮನೆಗೆ ಹೋಗಿ ಮಹಿಳೆಯರು, ಯುವಕರು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದವರು, ಎಲ್ಲಾ ಜಾತಿ ವರ್ಗದವರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಸದಸ್ಯತ್ವಾ ಅಭಿಯಾನ ಯಶಸ್ವಿಗೊಳಿಸುವಂತೆ ಮಂಡಲ ಅಧ್ಯಕ್ಷರು, ಪ್ರಧಾನ ಕಾರ್ಯದರ್ಶಿಗಳು, ಪದಾಧಿಕಾರಿಗಳು ಹಾಗೂ ಕಾರ್ಯಕರ್ತರಲ್ಲಿ ವಿನಂತಿಸಿದ ಬಿ.ವೈ.ವಿಜಯೇಂದ್ರ ಶಕ್ತಿ ಕೇಂದ್ರ, ಮಹಾ ಶಕ್ತಿ ಕೇಂದ್ರಕ್ಕೆ ಶಾಸಕರು, ಮಾಜಿ ಶಾಸಕರುಗಳು, ಮುಖಂಡರುಗಳು ಪ್ರವೇಶಿಸಬೇಕೆಂದು ಸೂಚಿಸಿದರು.

ರಾಜ್ಯದಲ್ಲಿ ಬಿ.ಎಸ್.ಯಡಿಯೂರಪ್ಪ, ಬಸವರಾಜ್‌ಬೊಮ್ಮಾಯಿ ಇವರುಗಳು ಮುಖ್ಯಮಂತ್ರಿಗಳಾಗಿದ್ದಾಗ ಕಾಂಗ್ರೆಸ್‌ನಿಂದ ಅನೇಕ ಆಪಾದನೆಗಳನ್ನು ಎದುರಿಸಿ ಅಧಿಕಾರ ಕಳೆದುಕೊಳ್ಳುವಂತಾಯಿತು. ಈಗ ನಮ್ಮ ಪಕ್ಷ 66 ಸ್ಥಾನಗಳಲ್ಲಿ ಗೆದ್ದು ವಿಧಾನಸಭೆಯಲ್ಲಿ ವಿರೋಧ ಪಕ್ಷದಲ್ಲಿ ಕುಳಿತಿದೆ. ಚುನಾವಣೆ ಪೂರ್ವದಲ್ಲಿ ಐದು ಉಚಿತ ಗ್ಯಾರೆಂಟಿಗಳನ್ನು ಘೋಷಿಸಿ ಅಧಿಕಾರಕ್ಕೆ ಬಂದಿರುವ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ನೀಡಿರುವ ಭರವಸೆಗಳನ್ನು ಈಡೇರಿಸುವಲ್ಲಿ ವಿಫಲರಾಗಿದ್ದಾರೆ. ಯಾವುದೇ ಹೊಸ ಯೋಜನೆಗಳನ್ನು ಘೋಷಿಸಿಲ್ಲ. ಗುಲ್ಬರ್ಗದಲ್ಲಿ ಕುಳಿತು ಕಲ್ಯಾಣ ಕರ್ನಾಟಕಕ್ಕೆ ಹನ್ನೊಂದುವರೆ ಸಾವಿರ ಕೋಟಿ ರೂ.ಗಳನ್ನು ಘೋಷಿಸಿ ರಾಜ್ಯದ ಜನರ ಕಿವಿಗೆ ಹೂವು ಮುಡಿಸಿದ್ದಾರೆ. ಬಿ.ಎಸ್.ಯಡಿಯೂರಪ್ಪನವರು ಅನುಭವ ಮಂಟಪ ಅಭಿವೃದ್ದಿಗೆ ಆರು ಕೋಟಿ ರೂ.ಗಳನ್ನು ಘೋಷಿಸಿದ್ದರು. ನೀರಾವರಿಗೆ ಬಸವರಾಜ್ ಬೊಮ್ಮಾಯಿ ಹದಿನೆಂಟು ಸಾವಿರ ಕೋಟಿ ರೂ.ಗಳನ್ನು ಘೋಷಿಸಿದ್ದರು. ಎಲ್ಲದಕ್ಕೂ ಈಗಿನ ಮುಖ್ಯಮಂತ್ರಿ ಕಲ್ಲು ಹಾಕಿ ಬಿಜೆಪಿ. ಯೋಜನೆಗಳನ್ನೆಲ್ಲಾ ತಡೆದಿದ್ದಾರೆ. ರಾಜ್ಯದಲ್ಲಿ ನೆರೆ ವೀಕ್ಷಣೆಗೆ ಪ್ರವಾಸ ಮಾಡುತ್ತಿಲ್ಲ. ಮುಖ್ಯಮಂತ್ರಿ ಮೈಸೂರಿಗೆ, ಉಪ ಮುಖ್ಯಮಂತ್ರಿ ಬೆಂಗಳೂರಿಗಷ್ಟೆ ಮೀಸಲಾಗಿದ್ದಾರೆಂದು ಬಿ.ವೈ.ವಿಜಯೇಂದ್ರ ತರಾಟೆ ತೆಗೆದುಕೊಂಡರು.

ರೈತರ ಸಮಸ್ಯೆಗಳಿಗೆ ಸ್ಪಂದಿಸುತ್ತಿಲ್ಲ. ಗೃಹಲಕ್ಷ್ಮಿ ಯೋಜನೆ ನಿಂತಿದೆ. ದರಿದ್ರ ಸರ್ಕಾರ ರಾಜ್ಯದಲ್ಲಿರುವುದರಿಂದ ನಿರಂತರ ಹೋರಾಟ ಮಾಡಿಕೊಂಡು ಬರುತ್ತಿದ್ದೇವೆ. ಕರ್ನಾಟಕ ವಾಲ್ಮೀಕಿ ಅಭಿವೃದ್ದಿ ನಿಗಮದ 187 ಕೋಟಿ ರೂ.ಗಳನ್ನು ತೆಲಂಗಾಣದ ಬೇರೆ ಬೇರೆ ಹತ್ತು ಖಾತೆಗಳಿಗೆ ವರ್ಗಾಯಿಸಲಾಗಿದೆ. ಮುಡಾ ಹಗರಣ, ಎಸ್ಸಿ.ಪಿ. ಟಿ.ಎಸ್ಪಿ. ಯೋಜನೆಯಡಿ ಪರಿಶಿಷ್ಟ ಜಾತಿ ಪರಿಶಿಷ್ಟ ವರ್ಗದವರ ಅಭಿವೃದ್ದಿಗಾಗಿ ಬಳಸಬೇಕಾಗಿರುವ 24 ಸಾವಿರ ಕೋಟಿ ರೂ.ಗಳನ್ನು ಬೇರೆ ಬೇರೆ ಉದ್ದೇಶಗಳಿಗೆ ಬಳಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ದಲಿತರ ಬಗ್ಗೆ ಮಾತನಾಡುವ ನೈತಿಕತೆಯಿಲ್ಲ. 87 ಕೋಟಿ ರೂ.ಗಳನ್ನು ನುಂಗಿರುವುದಾಗಿ ಸ್ವತಃ ಮುಖ್ಯಮಂತ್ರಿಯೆ ಸದನದಲ್ಲಿ ಒಪ್ಪಿಕೊಂಡಿದ್ದಾರೆ. ಒಂಟಿ ಕಾಲಲ್ಲಿ ನಿಂತಿರುವ ಕಾಂಗ್ರೆಸ್ ಸರ್ಕಾರ ಯಾವಾಗ ಬಿದ್ದು ಹೋಗುತ್ತದೋ ಗೊತ್ತಿಲ್ಲ. ಕುರ್ಚಿಗಾಗಿ ಕಾದಾಟ ಶುರುವಾಗಿದೆ. ರಾಹುಲ್‌ಗಾಂಧಿ ವಿದೇಶದಲ್ಲಿ ಕುಳಿತು ಕೇಂದ್ರದಲ್ಲಿ ನಮ್ಮ ಪಕ್ಷ ಅಧಿಕಾರಕ್ಕೆ ಬಂದರೆ ಮೀಸಲಾತಿಯನ್ನು ರದ್ದುಪಡಿಸುತ್ತೇವೆಂದು ಹೇಳುತ್ತಿದ್ದಾರೆ. ಮುಂದೆ ಎದುರಾಗುವ ತಾಲ್ಲೂಕು ಪಂಚಾಯಿತಿ, ಜಿಲ್ಲಾ ಪಂಚಾಯಿತಿ ಚುನಾವಣೆಯಲ್ಲಿ ಬಿಜೆಪಿ. ಸ್ಪಷ್ಟಬಹುಮತಗಳೊಂದಿಗೆ ಗೆಲ್ಲಬೇಕು. ಅದಕ್ಕಾಗಿ ಕಾರ್ಯಕರ್ತರು ಈಗಿನಿಂದಲೆ ಸಿದ್ದರಾಗಿ ಎಂದು ಬಿ.ವೈ.ವಿಜಯೇಂದ್ರ ಕರೆ ನೀಡಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅಲ್ಪಸಂಖ್ಯಾತರನ್ನು ತುಷ್ಟೀಕರಣಗೊಳಿಸುತ್ತಿರುವುದರಿಂದ ನಾಗಮಂಗದಲ್ಲಿ ಗಣೇಶ ಮೆರವಣಿಗೆಯಲ್ಲಿ ಅನ್ಯ ಕೋಮಿನವರು ಕಲ್ಲು, ಪೆಟ್ರೋಲ್ ಬಾಂಬ್ ತೂರಿ ನಮ್ಮ ಪಕ್ಷದ ಕಾರ್ಯಕರ್ತರ ಮೇಲೆ ಹಲ್ಲೆ ನಡೆಸಿ ಅಂಗಡಿಗಳಿಗೆ ಬೆಂಕಿ ಹಚ್ಚಿದ್ದಾರೆ. ಪಾಂಡವಪುರದಲ್ಲಿ ಪಕ್ಷದ ಕಾರ್ಯಾಲಯದೊಳಗೆ ಪೊಲೀಸರು ಬೂಟುಗಾಲಿನಲ್ಲಿ ಪ್ರವೇಶಿಸಿದ್ದಾರೆ. ಚಿತ್ರದುರ್ಗ ಹಿಂದೂ ಮಹಾಗಣಪತಿ ಮೆರವಣಿಗೆಯಲ್ಲೂ ಕಿಡಿಗೇಡಿಗಳು ಗಲಾಟೆ ಮಾಡಬಹುದು. ಇನ್ನಾದರೂ ಕಾರ್ಯಕರ್ತರು ಎಚ್ಚೆತ್ತುಕೊಳ್ಳಿ. ದೇಶದ್ರೋಹಿಗಳಿಗೆ ಕಾಂಗ್ರೆಸ್ ರತ್ನಗಂಬಳಿ ಹಾಸುತ್ತಿರುವುದರಿಂದ ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣವಾಗಿ ಹದಗೆಟ್ಟಿದೆ. ಕಾಂಗ್ರೆಸ್‌ನ ಗೊಡ್ಡು ಬೆದರಿಕೆಗಳಿಗೆ ನಾನು ಹೆದರುವವನಲ್ಲ ಎಂದು ಬಿ.ವೈ.ವಿಜಯೇಂದ್ರ ಸವಾಲು ಹಾಕಿದರು.ಸಂಸದಗೋವಿಂದಕಾರಜೋಳ ಮಾತನಾಡಿ ದೇಶದಲ್ಲಿ ಬಿಜೆಪಿ.ಸದಸ್ಯತ್ವಾ ಅಭಿಯಾನ ಶುರುವಾಗಿದೆ. ಚಿತ್ರದುರ್ಗದಲ್ಲಿ ಎಂ.ಪಿ.ಸ್ಥಾನ ಗೆದ್ದ ಮೇಲೆ ಕಾರ್ಯಕರ್ತರಿಗೆ ಆನೆ ಬಲ ಬಂದಂತಾಗಿದೆ. ಆದರೆ ಸದಸ್ಯತ್ವಾ ಅಭಿಯಾನದಲ್ಲಿ ಜಿಲ್ಲೆ ಹಿಂದುಳಿದಿದೆ. ಮೂರುವರೆ ಲಕ್ಷ ಸದಸ್ಯತ್ವಾ ಗುರಿ ನೀಡಿದೆ. ಕಾರ್ಯಕರ್ತರು ಮನಸ್ಸು ಮಾಡಿದರೆ ಸದಸ್ಯತ್ವಾಅಭಿಯಾನ ದೊಡ್ಡದೇನಲ್ಲ. ಇನ್ನು ನಾಲ್ಕೈದು ದಿನಗಳಲ್ಲಿ ನಿಮಗೆ ಕೊಟ್ಟಿರುವ ಗುರಿ ತಲುಪಬೇಕು. ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಚುನಾವಣೆ ನಿಮ್ಮದು. ಬಿ.ವೈ.ವಿಜಯೇಂದ್ರರವರ ಕೈಬಲಪಡಿಸುವಲ್ಲಿ ಪಣ ತೊಡಿ ಎಂದು ವಿನಂತಿಸಿದರು.

ವಿಧಾನಪರಿಷತ್ ಸದಸ್ಯ ಕೆ.ಎಸ್.ನವೀನ್ ಪ್ರಾಸ್ತಾವಿಕವಾಗಿ ಮಾತನಾಡಿ ಚಿತ್ರದುರ್ಗ ಜಿಲ್ಲೆಯಲ್ಲಿ ಗಟ್ಟಿ ಸಂಘಟನೆ, ಕಾರ್ಯಕರ್ತರಿದ್ದಾರೆ. ಸದಸ್ಯತ್ವಾ ಅಭಿಯಾನದಲ್ಲಿ ಜಿಲ್ಲೆ ಹಿಂದಿದೆ. ರಾಷ್ಟ್ರ, ರಾಜ್ಯ ನಾಯಕರ ಕನಸು ಈಡೇರಿಸಬೇಕಿದೆ. ಸದಸ್ಯತ್ವಾ ಅಭಿಯಾನ ಅರ್ಜಿಯಲ್ಲಿ ತಾಂತ್ರಿಕತೆಯಿರುವುದರಿಂದ ದೆಹಲಿಯಲ್ಲಿಯೇ ಕುಳಿತು ನಾಯಕರು ಜಿಲ್ಲೆಯಲ್ಲಿ ಆಗಿರುವ ಸದಸ್ಯತ್ವಾ ಅಭಿಯಾನದ ಕುರಿತು ಮಾಹಿತಿ ಪಡೆದುಕೊಳ್ಳಬಹುದಾಗಿರುವುದರಿಂದ ಜಿಲ್ಲೆಯ ಆರು ವಿಧಾನಸಭಾ ಕ್ಷೇತ್ರ, ಒಂಬತ್ತು ಮಂಡಲಗಳಲ್ಲಿ ಸದಸ್ಯತ್ವಾ ಅಭಿಯಾನದ ಗುರಿಯನ್ನು ತಲುಪುವ ಸಂಕಲ್ಪ ಮಾಡುವಂತೆ ಮಂಡಲ ಅಧ್ಯಕ್ಷರು, ಪ್ರಧಾನ ಕಾರ್ಯದರ್ಶಿಗಳು, ಪದಾಧಿಕಾರಿಗಳು ಹಾಗೂ ಕಾರ್ಯಕರ್ತರುಗಳಲ್ಲಿ ಕೋರಿದರು.

ಬಿಜೆಪಿ.ಜಿಲ್ಲಾಧ್ಯಕ್ಷಎ.ಮುರಳಿ,ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ, ಮಾಜಿ ಶಾಸಕ ಜಿ.ಹೆಚ್.ತಿಪ್ಪಾರೆಡ್ಡಿ,ವಿಧಾನಪರಿಷತ್ ಸದಸ್ಯ ಎನ್.ರವಿಕುಮಾರ್, ಭೀಮಸಮುದ್ರದ ಜಿ.ಎಸ್.ಅನಿತ್‌ಕುಮಾರ್, ರಾಜ್ಯ ಕಾರ್ಯದರ್ಶಿಗಳಾದ ತಮ್ಮೇಗೌಡ, ಶರಣ ತಳ್ಳಿಕೇರಿ, ಬಿಜೆಪಿ.ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಜಿ.ಟಿ.ಸುರೇಶ್ ಸಿದ್ದಾಪುರ, ಸಂಪತ್‌ಕುಮಾರ್, ಮಧುಗಿರಿ ಜಿಲ್ಲಾ ಬಿಜೆಪಿ. ಅಧ್ಯಕ್ಷ ಹನುಮಂತೆಗೌಡ, ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷೆ ಸೌಭಾಗ್ಯ ಬಸವರಾಜನ್, ಎಸ್.ಲಿಂಗಮೂರ್ತಿ, ಬಿಜೆಪಿ. ಮಾಜಿ ಅಧ್ಯಕ್ಷ ಜಿ.ಎನ್.ಸುರೇಶ್, ಕುಮಾರಸ್ವಾಮಿ, ಮಲ್ಲಿಕಾರ್ಜುನ ವೇದಿಕೆಯಲ್ಲಿದ್ದರು.

## ಪ್ರಮುಖ ಸುದ್ದಿ

### ಕ್ಷೇತ್ರದ ಸರ್ವತೋಮುಖ ಅಭಿವೃದ್ಧಿಗೆ ಜವಾಬ್ದಾರಿಹೊತ್ತ ಅಧಿಕಾರಿಗಳು ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಬೇಕು

# ಸಾರ್ವಜನಿಕರ ಸಮಸ್ಯೆಗೆ ಕ್ರಿಯಾಶೀಲವಾಗಿ ಸ್ಪಂದಿಸಿದರೆ ಮಾತ್ರ ಆಡಳಿತದ ಮೌಲ್ಯ ಹೆಚ್ಚುತ್ತದೆ: ಟಿ.ರಘುಮೂರ್ತಿ

» ಚಳ್ಳಕೆರೆ

ಚಳ್ಳಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ತ್ರೈಮಾಸಿಕ ಕೆಡಿಪಿ ಸಭೆ ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ಅಧ್ಯಕ್ಷತೆಯಲ್ಲಿ ತಾಲ್ಲೂಕು ಪಂಚಾಯಿತಿ ಕಾರ್ಯಾಲಯದಲ್ಲಿ ನಡೆಯಿತು. ಸುಮಾರು ಮೂರು ಗಂಟೆಗಳ ಕಾಲ ವಿವಿಧ ತಾಲ್ಲೂಕು ಮಟ್ಟದ ಅಧಿಕಾರಿಗಳು, ಪಿಡಿಒಗಳು ಹಾಗೂ ತಾಲ್ಲೂಕು ಪಂಚಾಯಿತಿ ಕೆಡಿಪಿ ಸದಸ್ಯರ ಸಮಕ್ಷಮದಲ್ಲಿ ನಡೆದಿದ್ದು, ಆಡಳಿತಕ್ಕೆ ಚುರುಕುಮುಟ್ಟಿಸಲು ಶಾಸಕರು ಕೆಲವು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆಯನ್ನು ಸಹ ನೀಡಿದರು.



ಪ್ರಾರಂಭದಲ್ಲಿ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಎಚ್.ಶಶಿಧರ ಸ್ವಾಗತಿಸಿದರು. ತಹಶೀಲ್ದಾರ್ ರೇಹಾನ್ ಪಾಷ, ಚಿತ್ರದುರ್ಗ ಪ್ರಭಾರ ತಹಶೀಲ್ದಾರ್ ರವಿಕುಮಾರ್, ಲೀಡ್‌ಬ್ಯಾಂಕ್ ವ್ಯವಸ್ಥಾಪಕ ಕುಮಾರ್‌ಬಾಬು, ತಾಲ್ಲೂಕು ಪಂಚಾಯಿತಿ ಆಡಳಿತಾಧಿಕಾರಿ, ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ, ಗ್ಯಾರಂಟಿ ಅನುಷ್ಠಾನ ತಾಲ್ಲೂಕು ಸಮಿತಿ ಅಧ್ಯಕ್ಷ ಗದ್ದಿಗೆ ತಿಪ್ಪೇಸ್ವಾಮಿ ಹಾಗೂ ಕೆಡಿಪಿ ಸದಸ್ಯರು ಸಭೆಯಲ್ಲಿ ಭಾಗವಹಿಸಿದ್ದರು.

ಸಭೆಯ ಆರಂಭದಲ್ಲೇ ಕೃಷಿ, ತೋಟಗಾರಿಕೆ, ರೇಷ್ಮೆ, ಕುಡಿಯುವ ನೀರು ಮುಂತಾದ ಇಲಾಖೆಗಳ ಮಾಹಿತಿಯನ್ನು ಪಡೆದ ಶಾಸಕರು, ಇತ್ತೀಚಿನ ದಿನಗಳಲ್ಲಿ ವಿಶೇಷವಾಗಿ ಸೆಪ್ಟಂಬರ್ ಮಾಹೆಯಲ್ಲಿ ಮಳೆ ಪ್ರಮಾಣ ಕುಸಿದಿದ್ದು, ಬೆಳೆಗಳು ಸಹ ನೆಲಕಚ್ಚಲಾರಂಭಿಸಿವೆ. ರೈತ ಸಮುದಾಯ ಮತ್ತೊಮ್ಮೆ ಸಂಕಷ್ಟಕ್ಕೆ ಸಿಲುಕಿದೆ ಸಂಬಂಧಪಟ್ಟ ಅಧಿಕಾರಿಗಳು ಈ ಬಗ್ಗೆ ಸರ್ಕಾರಕ್ಕೆ ವಿಶೇಷ ವರದಿಯನ್ನು ಕಳಿಸಿ ರೈತರಿಗೆ ನೆರವಾಗಬೇಕು ಎಂದರು.

ಸಹಾಯಕ ಕೃಷಿ ನಿರ್ದೇಶಕ ಜೆ.ಅಶೋಕ್ ಮಾಹಿತಿ ನೀಡಿ, ಜೂನ್ ತಿಂಗಳ ಅಂತ್ಯದಲ್ಲಿ ಬಿತ್ತನೆ ಸೇರಿದಂತೆ ಪ್ರಸ್ತುತ ಶೇ.70ರಷ್ಟು ಬಿತ್ತನೆಯಾಗಿದ್ದು, ಇಲ್ಲಿವರೆಗೂ ಆದ ಮಳೆಯಿಂದ ಕೇವಲ 50ರಷ್ಟು ಬೆಳೆ ನಿರೀಕ್ಷೆ ಮಾಡಬಹುದು. ಪೂರ್ಣಪ್ರಮಾಣದಲ್ಲಿ ಶೇಂಗಾ ಬಿತ್ತನೆ ಸಾಧ್ಯವಾಗಿಲ್ಲ. ಈ ಬಗ್ಗೆ ಸರ್ಕಾರಕ್ಕೆ ವರದಿಯನ್ನು ಕಳಿಸುವ ಭರವಸೆ ನೀಡಿದರು.

ಕೃಷಿ ಇಲಾಖೆಯ ಜಿಲ್ಲಾ ಜಂಟಿನಿದೇಶಕ, ತಾಲ್ಲೂಕು ಪಂಚಾಯಿತಿ ಆಡಳಿತಾಧಿಕಾರಿ ಮಂಜುನಾಥ ಮಾಹಿತಿ ನೀಡಿ, ಸರ್ಕಾರ ರೈತರಿಗೆ ಬೆಳೆನಷ್ಟ ಪರಿಹಾರ ಹಿನ್ನೆಲೆಯಲ್ಲಿ ಕಳೆದ 2022–23ನೇ ಸಾಲಿನಲ್ಲಿ ಒಟ್ಟು 46.58 ಕೋಟಿ ಹಣ ಬಿಡುಗಡೆಗೊಳಿಸಿದೆ. ಆಪೈಕಿ ತಾಲ್ಲೂಕಿಗೆ 9.23.26 ಸಾವಿರ ಹಣ ಬಿಡುಗಡೆಯಾಗಿದೆ. ಆದರೆ, ಈ ಹಣ ರೈತರ ಬೆಳೆನಷ್ಟ ಪರಿಹಾರ ಖಾತೆಗೆ ಜಮಾ ಆಗದೇ ಇರುವ ಅಘಾತಕಾರಿ ಬೆಳವಣಿಗೆಯಾಗಿದೆ. ಈ ಬಗ್ಗೆ ಸರ್ಕಾರ ನನಗೆ ಜಿಲ್ಲಾ ನೋಡಲ್ ಅಧಿಕಾರಿಯಾಗಿ ನಿಯೋಜಿಸಿದ ನಂತರ ತನಿಖೆ ನಡೆಸಿ ವರದಿ ನೀಡಿದ್ದೇನೆ. ಕಂದಾಯ ಇಲಾಖೆ ಅಧಿಕಾರಿಗಳು ಈ ಬಗ್ಗೆ ಹೆಚ್ಚು ಗಮನಹರಿಸಬೇಕಿದೆ ಎಂದರು.

ತಾಲ್ಲೂಕಿನಾದ್ಯಂತ ಕುಡಿಯುವ ನೀರಿನ ಸಮಸ್ಯೆಯ ಬಗ್ಗೆ ಪ್ರಸ್ತಾಪಿಸಿದ ಶಾಸಕರಿಗೆ ಮಾಹಿತಿ ನೀಡಿದ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಸಹಾಯಕ ಕಾರ್ಯಪಾಲಕ ಅಭಿಯಂತರ ದಯಾನಂದಸ್ವಾಮಿ, ಗ್ರಾಮೀಣ ಭಾಗದಲ್ಲಿ ಹಲವಾರುಕಡೆ ಬೋರ್‌ವೆಲ್‌ಗಳು ದುರಸ್ಥಿಯಾಗದೇ ಉಳಿದಿವೆ. ಕಾರಣ, ಕೆಲವು ಖಾಸಗಿ ಗುತ್ತಿಗೆದಾರರು ಕೆಲಸ ನಿರ್ವಹಿಸಲು ಮುಂದೆ ಬರುತ್ತಿಲ್ಲ. ಈ ಬಗ್ಗೆ ಹಿರಿಯ ಅಧಿಕಾರಿಗಳಿಗೆ ಮಾಹಿತಿ ನೀಡಿದೆ ಎಂದರು.

ತಾಲ್ಲೂಕಿನ ವಿವಿಧ ಹಾಸ್ಟೆಲ್‌ಗಳ ಅಧಿಕಾರಿಗಳಿಗೆ ಸೂಚನೆ ನೀಡಿದ ಶಾಸಕರು, ಗ್ರಾಮೀಣ ಪ್ರದೇಶದಿಂದ ವಿದ್ಯಾಭ್ಯಾಸಕ್ಕೆ ಬರುವ ರೈತರು, ಕೂಲಿಕಾರ್ಮಿಕ ಮಕ್ಕಳಿಗೆ ಸರ್ಕಾರ ಮಾರ್ಗಸೂಚಿಯಂತೆ ಎಲ್ಲಾ ಸವಲತ್ತು ಒದಗಿಸಬೇಕು, ಕೆಲ ಹಾಸ್ಟಲ್‌ನಲ್ಲಿ ವಿದ್ಯಾರ್ಥಿಗಳೇ ಊಟದ ಅವ್ಯವಸ್ಥೆಯ ಬಗ್ಗೆ ಮಾಹಿತಿ ನೀಡಿದ್ದಾರೆ. ಸಂಬಂಧಪಟ್ಟ ಅಧಿಕಾರುಗಳು ಗಮನಹರಿಸಬೇಕು ಎಂದರು.

ಚಳ್ಳಕೆರೆ ನಗರಕ್ಕೆ ಹೊಂದಿಕೊಂಡಿರುವ ನಗರಂಗೆರೆ, ದೊಡ್ಡೇರಿ, ಬುಡ್ನಹಟ್ಟಿ ಮತ್ತು ನನ್ನಿವಾಳ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸಿ.ಎ.ಸೈಟ್‌ಗಳನ್ನು ಸರ್ಕಾರಿ ಕಚೇರಿಗಳಿಗೆ ನೀಡುವಂತೆ ಸಂಬಂಧಪಟ್ಟ ಪಿಡಿಒಗಳಿಗೆ ಸೂಚನೆ ನೀಡಿದರು. ಈ ಬಗ್ಗೆ ತಹಶೀಲ್ದಾರ್ ಮತ್ತು ಇಒ ಹೆಚ್ಚು ಗಮನಹರಿಸಬೇಕು ಎಂದರು. ಶಿಶು ಅಭಿವೃದ್ಧಿ ಅಧಿಕಾರಿ ಹರಿಪ್ರಸಾದ್ ಮಾಹಿತಿ ನೀಡಿ, ಹಲವಾರು ಕಡೆ ಅಂಗನವಾಡಿ ಕಟ್ಟಡ ನಿರ್ಮಾಣಕ್ಕೆ ಭೂಮಿಪೂಜೆ ನೆರವೇರಿಸಿದೆ. ಗೃಹಲಕ್ಷ್ಮಿ ಯೋಜನೆಯಡಿ ತಾಲ್ಲೂಕಿನ ಸುಮಾರು 270 ಮಹಿಳೆಯರು ಜಿಎಸ್‌ಟಿ ಮತ್ತು ಆದಾಯ ತೆರಿಗೆ ಪಾವತಿದಾರರಾಗಿದ್ದು, ಈ ಬಗ್ಗೆ ತನಿಖೆ ಮುಂದುವರೆಸಲಾಗಿದೆ ಎಂದರು.



| ಚಿನ್ನದ ಬೆಲೆ | |
|---|---|
| 91.6 ಕೆಡಿಎಂ (ಗ್ರಾಂ) | 5830 |
| 85 ಕೆಡಿಎಂ (ಗ್ರಾಂ) | 5330 |



| ಬೆಳ್ಳಿ ಬೆಲೆ | |
|---|---|
| ಕೆಜಿ | 67500 |



## ಫಾಸ್ಟ್ ನ್ಯೂಸ್

### 3 ದಿನಗಳ ಕಮ್ಮಟ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಂದ ಅರ್ಜಿ

» ಚಿತ್ರದುರ್ಗ

ಕರ್ನಾಟಕ ಸಾಹಿತ್ಯ ಅಕಾಡೆಮಿಯು ಹಾವೇರಿ ಜಿಲ್ಲೆಯ ಗೊಟಗೋಡಿಯ ಕರ್ನಾಟಕ ಜಾನಪದ ವಿಶ್ವವಿದ್ಯಾಲಯ ಸಹಯೋಗದಲ್ಲಿ ಗಿರಿಜನ ಉಪಯೋಜನೆಯಡಿ "ಕನ್ನಡ ಸಾಹಿತ್ಯ ಮತ್ತು ಸಾಂವಿಧಾನಿಕ ಮೌಲ್ಯಗಳು" ಎಂಬ ಹೆಸರಿನಲ್ಲಿ 3 ದಿನಗಳ ಕಮ್ಮಟವನ್ನು ಅಕ್ಟೋಬರ್ ಕೊನೆಯ ವಾರದಲ್ಲಿ ಕರ್ನಾಟಕ ಜಾನಪದ ವಿಶ್ವಿದ್ಯಾಲಯದಲ್ಲಿ ನಡೆಸಲು ಉದ್ದೇಶಿಸಿದ್ದು, ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅ.8 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಆಸಕ್ತಿಯಿರುವ 20 ರಿಂದ 45ವರ್ಷ ವಯಸ್ಸುಳ್ಳ ಪರಿಶಿಷ್ಟ ಪಂಗಡಕ್ಕೆ ಸೇರಿದ ರಾಜ್ಯದ ಎಲ್ಲಾ ಭಾಗದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಕರ್ನಾಟಕ ಸಾಹಿತ್ಯ ಅಕಾಡೆಮಿಯ ವೆಬ್‌ಸೈಟ್ http://karnatakasahithyaacademy.org ಯಿಂದ ಅರ್ಜಿ ನಮೂನೆ ಹಾಗೂ ವಿವರಗಳನ್ನು ಪಡೆದುಕೊಳ್ಳಬಹುದು ಎಂದು ಕರ್ನಾಟಕ ಸಾಹಿತ್ಯ ಅಕಾಡೆಮಿಯ ರಿಜಿಸ್ಟ್ರಾರ್ ಎನ್.ಕರಿಯಪ್ಪ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಬೆಂಬಲ ಬೆಲೆಯಲ್ಲಿ ಹೆಸರು ಕಾಳು ಖರೀದಿ: ನೋಂದಣಿಗೆ ಅವಕಾಶ

» ಚಿತ್ರದುರ್ಗ

ಜಿಲ್ಲಾಧಿಕಾರಿಗಳ ನಿರ್ದೇಶನದಂತೆ 2024-25ನೇ ಸಾಲಿನ ಕರ್ನಾಟಕ ಸರ್ಕಾರದ ಬೆಂಬಲಬೆಲೆ ಯೋಜನೆಯಡಿಯಲ್ಲಿ ರೈತರಿಂದ ಹೆಸರು ಕಾಳು ಖರೀದಿ ಮಾಡಲು ಜಿಲ್ಲಾ ಟಾಸ್ಕ್ ಫೋರ್ಸ್‌ನಲ್ಲಿ ತೀರ್ಮಾನಿಸಲಾಗಿದ್ದು, ಫ್ರೂಟ್ಸ್ ಐಡಿಯೊಂದಿಗೆ ರೈತರು ಬಯೋಮೆಟ್ರಿಕ್ ಮೂಲಕ ನೋಂದಣಿ ಮಾಡಿಕೊಳ್ಳಬೇಕು ಎಂದು ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳದ ಜಿಲ್ಲಾ ವ್ಯವಸ್ಥಾಪಕರು ಕೋರಿದ್ದಾರೆ. ಬೆಂಬಲಬೆಲೆ ಯೋಜನೆಯಡಿಯಲ್ಲಿ ರೈತರಿಂದ ಹೆಸರು ಕಾಳು ಖರೀದಿ ಮಾಡಲು "ಎನ್‌ಸಿಸಿಎಫ್" ಸಂಸ್ಥೆಯ ಪರವಾಗಿ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳ ನಿಯಮಿತ ಚಿತ್ರದುರ್ಗ ಶಾಖೆಯ ಹೊಸದುರ್ಗ ತಾಲ್ಲೂಕಿನಲ್ಲಿ ಪಿಎಸಿಎಸ್ ಹೊಸದುರ್ಗ ರಸ್ತೆ ಮತ್ತು ಪಿಎಸಿಎಸ್ ಶ್ರೀರಾಂಪುರ ಹಾಗೂ ಹಿರಿಯೂರು ತಾಲ್ಲೂಕಿನಲ್ಲಿ ಪಿಎಸಿಎಸ್ ಐಮಂಗಲ ಮತ್ತು ಪಿಎಸಿಎಸ್ ಬಬ್ಬೂರು ಸಹಕಾರ ಸಂಘದಲ್ಲಿ ಹೆಸರು ಕಾಳು ನೋಂದಣಿಗೆ ಅವಕಾಶವಿದ್ದು, ರೈತರು ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದ್ದಾರೆ.ಸರ್ಕಾರದ ಆದೇಶದಂತೆ ಪ್ರತಿ ರೈತರಿಂದ ಪ್ರತಿ ಎಕರೆಗೆ 2 ಕ್ವಿಂಟಾಲ್‌ನಂತೆ ಗರಿಷ್ಠ 10 ಕ್ವಿಂಟಾಲ್ ಹೆಸರು ಕಾಳು ಖರೀದಿ ಮಾಡಲು ಜಿಲ್ಲಾ ಟಾಸ್ಕ್‌ಫೋರ್ಸ್‌ನಲ್ಲಿ ತೀರ್ಮಾನಿಸಲಾಗಿದೆ. ಫ್ರೂಟ್ಸ್ ಐಡಿಯೊಂದಿಗೆ ರೈತರು ಬಯೋಮೆಟ್ರಿಕ್ ಮೂಲಕ ನೋಂದಣಿ ಮಾಡಿಕೊಳ್ಳಬೇಕು.

ಹೆಚ್ಚಿನ ಮಾಹಿತಿಗಾಗಿ ಪಿಎಸಿಎಸ್ ಹೊಸದುರ್ಗ ರಸ್ತೆ ಸಹಕಾರ ಸಂಘದ ಕಾರ್ಯದರ್ಶಿ-9008558668, ಪಿಎಸಿಎಸ್ ಶ್ರೀರಾಂಪುರ ಸಹಕಾರ ಸಂಘದ ಕಾರ್ಯದರ್ಶಿ-9844820821, ಪಿಎಸಿಎಸ್ ಐಮಂಗಲ ಸಹಕಾರ ಸಂಘದ ಕಾರ್ಯದರ್ಶಿ-9986182809, ಪಿಎಸಿಎಸ್ ಬಬ್ಬೂರು ಸಹಕಾರ ಸಂಘದ ಕಾರ್ಯದರ್ಶಿ-8088146803 ಗೆ ಸಂಪರ್ಕಿಸುವಂತೆ ಚಿತ್ರದುರ್ಗ ಶಾಖಾ ವ್ಯವಸ್ಥಾಪಕರು ತಿಳಿಸಿದ್ದಾರೆ.

### ಲೋಕಾಯುಕ್ತ ಅಹವಾಲು ಸ್ವೀಕಾರ

» ಚಿತ್ರದುರ್ಗ

ಇದೇ ಸೆಪ್ಟೆಂಬರ್ 24 ಮತ್ತು 25 ರಂದು ಚಿತ್ರದುರ್ಗ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಿಗೆ ಖುದ್ದಾಗಿ ಲೋಕಾಯುಕ್ತ ಅಧಿಕಾರಿಗಳು ಭೇಟಿ ನೀಡಿ ಸಾರ್ವಜನಿಕರಿಂದ ದೂರು ಹಾಗೂ ಅವಹಾಲುಗಳನ್ನು ಸ್ವೀಕರಿಸುವರು. ಸರ್ಕಾರಿ ಕಚೇರಿಗಳಲ್ಲಿ ತಮ್ಮ ಕೆಲಸಗಳನ್ನು ಮಾಡಿಕೊಡಲು ಅಲ್ಲಿನ ಅಧಿಕಾರಿ, ಸಿಬ್ಬಂದಿಗಳು ಲಂಚದ ಹಣಕ್ಕಾಗಿ ಬೇಡಿಕೆಯಿಟ್ಟಲ್ಲಿ, ಸರ್ಕಾರವು ಸಾರ್ವಜನಿಕರಿಗಾಗಿ ರೂಪಿಸಲಾಗಿರುವ ಅನೇಕ ಯೋಜನೆಗಳನ್ನು ಸರ್ಕಾರಿ ಅಧಿಕಾರಿಗಳು ಅನುಷ್ಠಾನಗೊಳಿಸದೇ ಇರುವುದು ಮತ್ತು ಅಂತಹ ಯೋಜನೆಗಳನ್ನು ಸಾರ್ವಜನಿಕರಿಗೆ ತಲುಪಿಸಲು ಅನಾವಶ್ಯಕ ವಿಳಂಬ, ಕರ್ತವ್ಯದಲ್ಲಿ ನಿರ್ಲಕ್ಷತನ, ತಾರತಮ್ಯ ತೋರುವುದು, ಅರ್ಹ ಫಲಾನುಭವಿಗಳಿಗೆ ಸರ್ಕಾರದ ಯೋಜನೆಗಳ ಲಾಭ ಸರಿಯಾದ ರೀತಿಯಲ್ಲಿ ತಲುಪಿಸದೇ ಇರುವುದು ಇತ್ಯಾದಿ ವಿಷಯಗಳಿಗೆ ಸಂಬಂಧಿಸಿದಂತೆ ದೂರುಗಳನ್ನು ನಿಗಧಿತ ನಮೂನೆಯಲ್ಲಿ ಸಲ್ಲಿಸಬಹುದಾಗಿದೆ.

**ಲೋಕಾಯುಕ್ತ ಅಧಿಕಾರಿಗಳ ತಾಲ್ಲೂಕು ಭೇಟಿ ವಿವರ:** ಸೆ.24 ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 1.30 ರವರೆಗೆ ಹಿರಿಯೂರು ತಾಲ್ಲೂಕು ಪಂಚಾಯಿತಿ, ಮೊಳಕಾಲ್ಮುರು ತಾಲ್ಲೂಕು ಪಂಚಾಯಿತಿ ಹಾಗೂ ಅಂದು ಮಧ್ಯಾಹ್ನ 2.30 ರಿಂದ ಸಂಜೆ 5.30 ರವರೆಗೆ ಚಿತ್ರದುರ್ಗ ತಾಲ್ಲೂಕು ಪಂಚಾಯಿತಿ, ಚಳ್ಳಕೆರೆ ತಾಲ್ಲೂಕು ಪಂಚಾಯಿತಿಯಲ್ಲಿ ಲೋಕಾಯುಕ್ತ ಅಧಿಕಾರಿಗಳು ಹಾಜರಿದ್ದು, ಸಾರ್ವಜನಿಕರಿಂದ ಅಹವಾಲು ಸ್ವೀಕರಿಸುವರು. ಸೆ.25ರಂದು ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 1.30 ರವರೆಗೆ ಹೊಸದುರ್ಗ ತಾಲ್ಲೂಕು ಪಂಚಾಯಿತಿ ಹಾಗೂ ಅಂದು ಮಧ್ಯಾಹ್ನ 2.30 ರಿಂದ ಸಂಜೆ 5.30 ರವರೆಗೆ ಹೊಳಲ್ಕೆರೆ ತಾಲ್ಲೂಕು ಪಂಚಾಯಿತಿಯಲ್ಲಿ ಲೋಕಾಯುಕ್ತ ಅಧಿಕಾರಿಗಳು ಹಾಜರಿದ್ದು, ಸಾರ್ವಜನಿಕರಿಂದ ದೂರು ಅಹವಾಲು ಸ್ವೀಕರಿಸುವರು.

# ಕಾರ್ಮಿಕರ ಶ್ರಮದಿಂದ ಸಮಾಜ ಸುವ್ಯವಸ್ಥಿತ

» ದಾವಣಗೆರೆ

ಕಾರ್ಮಿಕರು ದೇಶದ ಅಭಿವೃದ್ಧಿಯ ನೈಜ ಆಧಾರಸ್ತಂಭವಾಗಿದ್ದು ಇವರ ಶ್ರಮದಿಂದ ಸಮಾಜ ಸುವ್ಯವಸ್ಥಿತವಾಗಿ ನಡೆಯುತ್ತಿದೆ. ಇದಕ್ಕಾಗಿ ಕಾರ್ಮಿಕ ವರ್ಗ ನೆಮ್ಮದಿಯಾಗಿರಲೆಂದು ಸರ್ಕಾರ ಅವರ ಅಭಿವೃದ್ದಿಗಾಗಿ ಅನೇಕ ಯೋಜನೆಗಳು, ಸೌಲಭ್ಯಗಳನ್ನು ಜಾರಿಗೊಳಿಸಿದ್ದು ಇವುಗಳ ಸದುಪಯೋಗ ಮಾಡಿಕೊಳ್ಳಬೇಕೆಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಕಾರ್ಯದರ್ಶಿ ಮಹಾವೀರ್ ಮ. ಕರೆಣ್ಣವರ್ ತಿಳಿಸಿದರು.

ಜಿಲ್ಲಾಡಳಿತ ಭವನದ ತುಂಗಭದ್ರ ಸಭಾಂಗಣದಲ್ಲಿ ಏರ್ಪಡಿಸಲಾದ ಜಿಲ್ಲಾ ಮಟ್ಟದ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ಕಾರ್ಮಿಕರೆಂಬ ಯಂತ್ರದಿಂದ ಸಮಾಜ ಸುಮಗವಾಗಿನಡೆದುಕೊಂಡುಹೋಗುತ್ತಿದೆ, ಒಂದು ಪಕ್ಷ ಕಾರ್ಮಿಕ ಯಂತ್ರ ಸರಿಯಾಗಿ ಕಾರ್ಯ ನಿರ್ವಹಿಸದೇ ಹೋದರೆ ಅನೇಕ ರೀತಿಯಲ್ಲಿ ತೊಂದರೆ ಎದುರಾಗುತ್ತದೆ. ಆದ್ದರಿಂದ ಕಾರ್ಮಿಕ ವರ್ಗದವರ ಜೀವನ ಮಟ್ಟ ಉತ್ತಮವಾಗಿರಲೆಂದು ಸರ್ಕಾರ ಹಲವಾರು ಯೋಜನೆಗಳನ್ನು ಅವರಿಗಾಗಿ ನೀಡಿದೆ. ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ನೋಂದಣಿಗೆ ಅವಕಾಶ ಮಾಡಿಕೊಟ್ಟು, ಕಾರ್ಮಿಕ ಇಲಾಖೆ ಅವರಿಗೆ ಸಹಕಾರ ನೀಡಲು ಸಜ್ಜಾಗಿದೆ, ಕಾರ್ಮಿಕರು ಇದರ ಫಲ ಪಡೆಯಬೇಕು ಎಂದು ತಿಳಿಸಿದರು.



ಕಾರ್ಮಿಕರಿಗೆ ಅನುಕೂಲ ಮಾಡಿಕೊಡಲು ಕಾರ್ಮಿಕ ಇಲಾಖೆಯಿಂದ ಕಾಲ ಕಾಲಕ್ಕೆ ಮಾಹಿತಿ ನೀಡಬೇಕು, ಕಾರ್ಮಿಕರು ತಮ್ಮಗಳ ಕುಟುಂಬದ ಜವಾಬ್ದಾರಿ ವ್ಯಕ್ತಿಗಳಾಗಿರುವ ನೀವು ಜಾಗೃತರಾಗಿ ಇತರರಿಗೂ ಮಾಹಿತಿ ತಿಳಿಸಬೇಕು. ತಮಗೆ ಅನ್ವಯವಾಗುವ ಯೋಜನೆಗಳಿಗೆ ಮಾತ್ರ ನೋಂದಣಿ ಮಾಡಿಸಿಕೊಳ್ಳಬೇಕು, ಸುಳ್ಳು ನೋಂದಣಿಗಳು ಕಂಡು ಬಂದಲ್ಲಿ ಇಲಾಖೆಯ ಗಮನಕ್ಕೆ ತರಬೇಕೆಂದು ತಿಳಿಸಿದರು.ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್ ಅಧ್ಯಕ್ಷತೆ ವಹಿಸಿ ಮಾತನಾಡಿ, ಇಂದಿನ ಕಾರ್ಯಾಗಾರದಲ್ಲಿ ವಿವಿಧ ಸಂಪನ್ಮೂಲ ವ್ಯಕ್ತಿಗಳು ಕಾರ್ಮಿಕ ಇಲಾಖೆ ಸೇರಿದಂತೆ ಸರ್ಕಾರದಿಂದ ಕಾರ್ಮಿಕರಿಗೆ ಲಭ್ಯವಿರುವ ವಿವಿಧ ಯೋಜನೆಗಳು, ಕಾರ್ಯಕ್ರಮಗಳು, ಕಾನೂನುಗಳ ಕುರಿತು ಮಾಹಿತಿ ನೀಡಲಿದ್ದಾರೆ. ಎಲ್ಲ ಕಾರ್ಮಿಕರು ಸವಿವರವಾಗಿ ಮಾಹಿತಿ ಪಡೆದುಕೊಂಡು ಸದುಪಯೋಗಮಾಡಿಕೋಳ್ಳಬೇಕುಎಂದು ತಿಳಿಸಿದರು.ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಅರುಣ್ ಕುಮಾರ್ ಎಲ್. ಎಚ್ ಮಾತನಾಡಿ. ಈ ಕಾರ್ಯಾಗಾರವು ಪರಿಣಾಮಕಾರಿಯಾಗಿ ಅನುಷ್ಠಾನ ಆಗಬೇಕಾದರೆ ಕಾರ್ಮಿಕ ಹಾಗೂ ವಿವಿಧ ಸಂಘಟನೆಗಳ, ಹಕ್ಕುಗಳು ಪರವಾಗಿ ಹೋರಾಟ ಮಾಡುತ್ತಿರುವ ಮುಖಂಡರಿಗೆ ಕಾನೂನು ಮತ್ತು ಯೋಜನೆಗಳ ಬಗ್ಗೆ ಮಾಹಿತಿ ಇರುವುದು ಬಹಳ ಮುಖ್ಯವಾಗಿದೆ ಎಂದು ತಿಳಿಸಿದರು.

ಸಂಪನ್ಮೂಲ ವ್ಯಕ್ತಿಯಾಗಿ ಪಾಲ್ಗೊಂಡಿದ್ದ ರಾಜಗೋಪಾಲ್ ವಿವಿಧ ಕಾರ್ಮಿಕ ಕಾಯ್ದೆಗಳ ಬಗ್ಗೆ ಮಾಹಿತಿ ನೀಡಿದರು. ಹಾಗೂ ಬಾಲ ಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ಅಧಿಕಾರಿಯಾದ ಮಂಜಪ್ಪ ಬಾಲ ಕಾರ್ಮಿಕ ಕಾಯ್ದೆ ಸೇರಿದಂತೆ ಕಾರ್ಮಿಕರಿಗೆ ದೊರೆಯುವ ಸೌಲಭ್ಯ ಮತ್ತು ಕಾನೂನುಗಳ ಬಗ್ಗೆ ಮಾಹಿತಿ ನೀಡಿದರು.ಕಾರ್ಯಗಾರದಲ್ಲಿ ಕಾರ್ಮಿಕ ಸಹಾಯಕ ಆಯುಕ್ತರಾದ ಡಾ. ಅವಿನಾಶ್ ನಾಯ್ಕ, ಕಾರ್ಮಿಕ ಅಧಿಕಾರಿ ಇಬ್ರಾಹಿಂ ಸಾಬ್, ಜಿಲ್ಲಾ ಬಾಲ ಕಾರ್ಮಿಕ ಯೋಜನಾ ನಿರ್ದೇಶಕರಾದ ಪ್ರಸನ್ನಕುಮಾರ್ ಇ.ಎನ್, ಕಾರ್ಮಿಕ ಸಂಘದ ಮಾಲೀಕರ, ಅಧ್ಯಕ್ಷರು, ಸಂಘಟಿತ ಮತ್ತು ಅಸಂಘಟಿತ ಪದಾಧಿಕಾರಿಗಳು ಹಾಜರಿದ್ದರು.

### ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸೂಚನೆ

# ಸಾಂಕ್ರಾಮಿಕ ರೋಗಗಳ ತಡೆಗೆ ನಿಗಾ ವಹಿಸಿ

» ಚಿತ್ರದುರ್ಗ

ಸಾಂಕ್ರಾಮಿಕ ರೋಗಗಳು ಸೇರಿದಂತೆ ಪ್ರಾಣಿ ಹಾಗೂ ಕೀಟ ಜನ್ಯ ರೋಗಗಳ ಹರಡುವಿಕೆಯನ್ನು ತಡೆಗಟ್ಟಲು ಜಿಲ್ಲಾ ಕಣ್ಗಾವಲು ಸಮಿತಿಯಿಂದ ಹೆಚ್ಚಿನ ನಿಗಾ ವಹಿಸುವಂತೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಜಿಲ್ಲಾ ಕಣ್ಗಾವಲು ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಾಂಕ್ರಮಿಕ ರೋಗಗಳನ್ನು ಬಹು ಬೇಗ ಪತ್ತೆ ಹಚ್ಚಿದರೆ, ಸಮುದಾಯದಲ್ಲಿ ಹೆಚ್ಚು ಜನರಿಗೆ ರೋಗ ಹರಡುವುದನ್ನು ತಡೆಗಟ್ಟಬಹುದು. ಕಲುಷಿತ ಆಹಾರ ಹಾಗೂ ನೀರಿನ ಸೇವನೆಯಿಂದ ಸಾರ್ವಜನಿಕರು ಅನಾರೋಗ್ಯಕ್ಕೆ ತುತ್ತಾಗುವ ಪ್ರಕರಣಗಳಲ್ಲಿ ಸ್ವಚ್ಛತೆ, ಶುದ್ಧ ಕುಡಿಯುವ ನೀರಿನ ಸರಬರಾಜಿನ ವ್ಯತ್ಯಯ ಉಂಟಾಗಿದ್ದರೆ, ಸ್ಥಳೀಯ ಸಂಸ್ಥೆಗಳ ಗಮನಕ್ಕೆ ಕೂಡಲೆ ತರಬೇಕು. ಇಂತಹ ಘಟನೆಗಳು ಮರುಕಳಿಸದಂತೆ ನೋಡಿಕೊಳ್ಳಬೇಕು ಎಂದರು.

ಜಿಲ್ಲೆಯಲ್ಲಿ ಈ ವರ್ಷ 294 ಹಾವು ಕಡಿತದ ಪ್ರಕರಣಗಳು ವರದಿಯಾಗಿವೆ. ಇವುಗಳ ಪೈಕಿ ನಾಲ್ಕು ಪ್ರಕರಣಗಳಲ್ಲಿ ಸಾವು ಸಂಭವಿಸಿರುವುದು ದುರದೃಷ್ಟಕರ ಸಂಗತಿಯಾಗಿದೆ. ಜನರಿಗೆ ಹಾಗೂ ಶಾಲಾ ಮಕ್ಕಳಿಗೆ ಹಾವು ಕಡಿತದಂತಹ ಸಂದರ್ಭದಲ್ಲಿ ನೀಡಬೇಕಾದ ಪ್ರಥಮ ಚಿಕಿತ್ಸೆ ಹಾಗೂ ತಕ್ಷಣವೇ ಸಮೀಪದ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಹಾವು ಕಚ್ಚಿದವರನ್ನು ದಾಖಲಿಸುವ ಬಗ್ಗೆ ಜಾಗೃತಿ ಮೂಡಿಸಬೇಕು.



ನಾಯಿ ಕಡಿತ ಪ್ರಕರಣದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರದ ಹಂತದಲ್ಲಿಯೇ ಎಲ್ಲಾ ಲಸಿಕೆ ಹಾಗೂ ಚುಚ್ಚುಮದ್ದು ನೀಡಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಆದೇಶದಂತೆ ಜಿಲ್ಲಾ ಕಣ್ಗಾವಲು, ಜಿಲ್ಲಾ, ತಾಲ್ಲೂಕು ಹಾಗೂ ಪ್ರಾಥಮಿಕ ಆರೋಗ್ಯ ತ್ವರಿತ ಪ್ರತಿಕ್ರಿಯಾ ತಂಡಗಳನ್ನು ರಚಿಸಿ ಆದೇಶ ಹೊರಡಿಸಲಾಗುವುದು. ಸಮಗ್ರ ರೋಗಗಳನ್ನು ತಡೆಗಟ್ಟುವಲ್ಲಿ ಜಿಲ್ಲಾ ಕಣ್ಗಾವಲು ಸಮಿತಿ ಹಾಗೂ ಆರೋಗ್ಯ ಇಲಾಖೆಗೆ ಎಲ್ಲಾ ಇಲಾಖೆಗಳು ಸಹಕಾರ ನೀಡಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಚಂದ್ರಶೇಖರ್ ಕಂಬಾಳಿ ಮಠ ಹೇಳಿದರು. ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಉಪನಿರ್ದೇಶಕ ಮಂಜುನಾಥ್, ಜಿಲ್ಲಾ ಆಯುಷ್ ಅಧಿಕಾರಿ ಡಾ.ಚಂದ್ರಕಾಂತ್ ನಾಗಸಮುದ್ರ, ಆರ್.ಸಿ.ಹೆಚ್ ಅಧಿಕಾರಿ ಡಾ.ಅಭಿನವ್, ತಾಲ್ಲೂಕು ಆರೋಗ್ಯಾಧಿಕಾರಿ ಬಿ.ವಿ.ಗಿರೀಶ್ ದ್ದರು.

# ತರಳಬಾಳು ಮಠದ ಶಾಲಾ-ಕಾಲೇಜು ಕಾಪಾಡಲು ಶಿವಸೈನ್ಯ ಬದ್ಧವಾಗಿ ನಿಂತಿದೆ: ಮಲ್ಲಿಕಾರ್ಜುನ್



» ಹೊಸದುರ್ಗ

ತರಳಬಾಳು ಮಠದ ಸಮಸ್ಯೆ ಮತ್ತು ಪರಿಸ್ಥಿತಿಯ ನಿವಾರಣೆಗಾಗಿ ಮಠದ ಎಲ್ಲಾ ಆಸ್ತಿ, 54 ಶಾಲಾ-ಕಾಲೇಜುಗಳ ಸ್ಥಿತಿಯನ್ನು ಒಳ್ಳೆಯ ರೀತಿಯಲ್ಲಿ ಕಾಪಾಡುವ ಸಲುವಾಗಿ ಶಿವಸೈನ್ಯ ಸಂಘಟನೆ ಗಟ್ಟಿಯಾಗಿ ನಿಲ್ಲಲಿದೆ. ಅಲ್ಲದೇ, ನಮ್ಮ ಸಂಘಟನೆಯನ್ನು ಪ್ರತಿಯೊಂದು ತಾಲೂಕು ಮತ್ತು ಜಿಲ್ಲೆಗಳಿಗೆ ವಿಸ್ತರಿಸಲಾಗುವುದು ಎಂದು ಶಿವಸೈನ್ಯ ಸಂಘಟನೆಯ ರಾಜ್ಯಾಧ್ಯಕ್ಷ ಹೆಬ್ಬಳ್ಳಿ ಮಲ್ಲಿಕಾರ್ಜುನ್ ಹೇಳಿದರು. ಪಟ್ಟಣದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಲಿಂಗೈಕ್ಯ ಶಿವಕುಮಾರ ಶ್ರೀಗಳ ಜೀವನದ ಹಾದಿಯಾಗಿ ನುಡಿದಂತೆ ನಡೆಯುವ, ನಡೆದಂತೆ ನುಡಿಯುವ ಸಮಾಜದ ಪರಿಕಲ್ಪನೆ, ಸತ್ಯವಂತಿಕೆ ಇಟ್ಟುಕೊಂಡು ಮಠ ಮತ್ತು ಪೀಠಕ್ಕೆ ಸಮಾಜಕ್ಕೆ ಶ್ರಮಿಸಿದವರಿಗೆ ಗೌರವ ತರುವ ನಿಟ್ಟಿನಲ್ಲಿ ನಮ್ಮ ಸಂಘಟನೆ ಕೆಲಸ ಮಾಡಲಿದೆ. ಬಸವ ತತ್ವ ಪ್ರಚಾರ, ಲಿಂಗ ದೀಕ್ಷೆ, ಶರಣ ಸಾಹಿತ್ಯ ಕಾರ್ಯಕ್ರಮ, ಸರ್ವಧರ್ಮ ಸಮ್ಮೇಳನ, ಜಂಗಮರ ದೀಕ್ಷಾ ಕಾರ್ಯಕ್ರಮ, ಸಮಾಜದ ಸಂಸ್ಕೃತಿ-ಸಂಸ್ಕಾರ ಪಾಲನೆ ಇನ್ನು ಅನೇಕ ವಿಚಾರಗಳು ಶಿವಸೈನ್ಯ ಸಂಘಟನೆಯ ಮೂಲ ಉದ್ದೇಶಗಳಾಗಿವೆ ಎಂದು ತಿಳಿಸಿದರು.ನಮ್ಮ ತರಳಬಾಳು ಪೀಠದ ಮೂಲಪುರುಷ ವಿಶ್ವಬಂಧು ಮರುಳಸಿದ್ಧರ ಆಶೀರ್ವಾದದೊಂದಿಗೆ ಯಾವುದೇ ಫಲಪೇಕ್ಷೆ ಬಯಸದೆ, ನಿಸ್ವಾರ್ಥದಿಂದ ಸಮಾಜದ ಏಳಿಗೆಗೆ ಮಠ-ಪೀಠಗಳ ಗೌರವಕ್ಕೆ ಸೇವೆ ಮಾಡಲು ಗಟ್ಟಿಯಾಗಿ ನಮ್ಮ ಸಂಘಟನೆ ನಿಂತಿದೆ. ತರಳಬಾಳು ಮಠದ ಭಕ್ತರ ಸಭೆಯಲ್ಲಿ ನನ್ನನ್ನು ಗುರುತಿಸಿ, ರಾಜ್ಯಾಧ್ಯಕ್ಷನನ್ನಾಗಿ ನೇಮಕ ಮಾಡಲಾಗಿದ್ದು, ಸಂಘಟನೆಯ ಮೂಲ ಉದ್ದೇಶಗಳಿಗೆ ಚ್ಯುತಿ ಬಾರದಂತೆ ಪ್ರಾಮಾಣಿಕವಾಗಿ ನನ್ನ ಜವಾಬ್ದಾರಿಯನ್ನು ನಿರ್ವಹಿಸುತ್ತೇನೆ ಎಂದರು. ಈ ವೇಳೆ ಸಂಘಟನೆಯ ನಿರ್ದೇಶಕ ಸಾಚಾ ಮಂಜಯ್ಯ, ನಿವೃತ್ತ ಎಂಜಿನಿಯರ್ ಮಲ್ಲಿಕಾರ್ಜುನ್, ಮುಖಂಡರಾದ ದೇವಿಗೆರೆ ನಂಜುಂಡಪ್ಪ, ಜಾನಕಲ್ ತಿಮ್ಮಪ್ಪ, ಸುಮಂತ್ ಮತ್ತು ಸಿಂಧು ಅಶೋಕ್ ಇದ್ದರು.

# ವಸತಿ ಶಾಲೆ ಕಾಮಗಾರಿ ಪ್ರಗತಿ ಪರಿಶೀಲಿಸಿದ ಚನ್ನಗಿರಿ ಶಾಸಕ

» ಚನ್ನಗಿರಿ

ಚಿಕ್ಕ ಮಾಡಾಳು ಬಳಿ ನಿರ್ಮಾಣವಾಗುತ್ತಿರುವ ಕಿತ್ತೂರು ರಾಣಿ ಚನ್ನಮ್ಮ ವಸತಿಯುತ ಶಾಲೆ ಕಟ್ಟಡದ ಪ್ರಗತಿಯನ್ನು ಶಾಸಕರಾದ ಬಸವರಾಜು ವಿ ಶಿವಗಂಗಾ ಪರಿಶೀಲನೆ ಮಾಡಿದರು.

ಶಾಲಾ ಕಟ್ಟಡ ಮುಕ್ತಾಯ ಹಂತಕ್ಕೆ ಬಂದಿದ್ದು ಅಧಿಕಾರಿಗಳೊಂದಿಗೆ ಭೇಟಿ ನೀಡಿದ ಶಾಸಕರು ಕೂಡಲೇ ಕಟ್ಟಡ ಕಾಮಗಾರಿ ಪೂರ್ಣಕ್ಕೆ ಸೂಚಿಸಿದರು. ಕಟ್ಟಡ ನಿರ್ಮಾಣ ಹಿನ್ನೆಲೆ ಚನ್ನಗಿರಿ ಪಟ್ಟಣದಲ್ಲಿ ಸದ್ಯ ಶಾಲೆ ನಡೆಯುತ್ತಿದೆ, ಇದೀಗ ಹೊಸ ಕಟ್ಟಡ ಕಾಮಗಾರಿ ಪೂರ್ಣಗೊಂಡ ಬಳಿಕ ನೂತನ ಶಾಲಾ ಕಟ್ಟಡಕ್ಕೆ ಸ್ಥಳಾಂತರ ಮಾಡುವುದಾಗಿ ತಿಳಿಸಿದರು.ಕಟ್ಟಡ ನಿರ್ಮಾಣ ಗುಣಮಟ್ಟದಿಂದ ಇರುಬೇಕು ಎಂದು ಅಧಿಕಾರಿಗಳಿಗೆ ತಾಕೀತು ಮಾಡದರು. ಇಲ್ಲಿ ವಿದ್ಯಾಭ್ಯಾಸ ಮಾಡುವ ವಿದ್ಯಾರ್ಥಿಗಳಿಗೆ ಯಾವುದೇ ಸಮಸ್ಯೆ ಉಂಟಾಗದಂತೆ ಸುಸಜ್ಜಿತ ಕಟ್ಟಡ ನಿರ್ಮಾಣ ಮಾಡಬೇಕು ಎಂದರು.



ವಸತಿ ಯುತ ಶಾಲೆಯಾದ ಹಿನ್ನೆಲೆ ಬಡ ಮಕ್ಕಳಿಗೆ ಅನುಕೂಲವಾಗಲಿದೆ ಎಂದರು. ವಸತಿ ಶಾಲೆಗೆ ದಾಖಲಾಗಲು ಪ್ರತಿವರ್ಷ ಹೆಚ್ಚು ಬೇಡಿಕೆ ಇದೇ, ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಬರುತ್ತಿದ್ದಾರೆ. ಇದಕ್ಕೆ ಕಾರಣ ಉಚಿತವಾಗಿ ವಸತಿಯೊಂದಿಗೆ ಉತ್ತಮ ಶಿಕ್ಷಣ ಕಲ್ಪಿಸುತ್ತಿರುವುದು ಎಂದರು.

ನಮ್ಮ ತಾಲ್ಲೂಕಿನ ಬಡ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಉತ್ತಮ ಶಿಕ್ಷಣ ಕಲ್ಪಿಸಲು ಬದ್ಧವಾಗಿದ್ದು ಶೀಘ್ರದಲ್ಲೇ ಈ ಶಾಲೆ ಉದ್ಘಾಟನೆ ಮಾಡಿ ವಿದ್ಯಾರ್ಥಿಗಳಿಗೆ ಅನುಕೂಲವಾಡಿಕೊಡುತ್ತೇವೆ ಎಂದರು.

### ಸಾರ್ವಜನಿಕರ ಸಮಸ್ಯೆಗೆ ಕ್ರಿಯಾಶೀಲವಾಗಿ ಸ್ಪಂದಿಸಿದರೆ ಮಾತ್ರ ಆಡಳಿತದ ಮೌಲ್ಯ ಹೆಚ್ಚುತ್ತದೆ

» ಮೊದಲ ಪುಟದಿಂದ

ಗ್ರಾಮೀಣ ಪ್ರದೇಶದ ಕಿರಾಣಿ ಅಂಗಡಿಗಳಲ್ಲಿ ಯಾವುದೇ ಕಾರಣಕ್ಕೂ ಅಕ್ರಮ ಮದ್ಯ ಮಾರಾಟ ಮಾಡದಂತೆ ಅಬಕಾರಿ ಇಲಾಖೆ ಅಧಿಕಾರಿಗಳು ಕಟ್ಟುನಿಟ್ಟಿನ ಕ್ರಮವಹಿಸುವಂತೆ ಸೂಚನೆ ನೀಡಿದರು. ತುರುವನೂರು ಹೋಬಳಿ ವ್ಯಾಪ್ತಿಯ ಮುದ್ದಾಪುರ ಗ್ರಾಮದಲ್ಲಿ ಸರ್ಕಾರಿಗೋಮಾಳದಲ್ಲಿ ಖಾಸಗಿ ವ್ಯಕ್ತಿಯೊಬ್ಬ ತೋಟನಿರ್ಮಿಸಿದ್ದು ತೆರವುಗೊಳಿಸುವಂತೆ ಸೂಚನೆ ನೀಡಿದರು.

## ಪ್ರಮುಖ ಸುದ್ದಿ

### ಆಡುಮಲ್ಲೇಶ್ವರ ಮೃಗಾಲಯದ ಸಿಬ್ಬಂದಿಗೆ ಆರೋಗ್ಯ ತಪಾಸಣೆ

# ರೇಬೀಸ್ ನಿಯಂತ್ರಣಕ್ಕೆ ಎಆರ್‌ವಿ ಮುಂಜಾಗ್ರತಾ ಲಸಿಕೆ ಪರಿಣಾಮಕಾರಿ

» ಚಿತ್ರದುರ್ಗ

ಪ್ರಾಣಿ ಕಡಿತದಿಂದ ಉಂಟಾಗುವ ರೇಬೀಸ್ ನಿಯಂತ್ರಣಕ್ಕೆ ಎಆರ್‌ವಿ ಮುಂಜಾಗ್ರತಾ ಲಸಿಕೆ ಪರಿಣಾಮಕಾರಿ ಎಂದು ಚಿತ್ರದುರ್ಗ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಹೇಳಿದರು.

ನಗರದ ಆಡುಮಲ್ಲೇಶ್ವರ ಕಿರು ಮೃಗಾಲಯದಲ್ಲಿ ಶನಿವಾರ ಆರೋಗ್ಯ ಇಲಾಖೆ, ಅರಣ್ಯ ಇಲಾಖೆಯ ಸಹಯೋಗದೊಂದಿಗೆ ಸ್ವಚ್ಛತಾ ಹೀ ಸೇವಾ ಪಾಕ್ಷಿಕದ ಸಲುವಾಗಿ ಮೃಗಾಲಯದ ಸಿಬ್ಬಂದಿಗೆ ಉಚಿತ ಆರೋಗ್ಯ ತಪಾಸಣಾ ಶಿಬಿರದಲ್ಲಿ ಅವರು ಮಾತನಾಡಿದರು. ಪ್ರಾಣಿಗಳೊಂದಿಗೆ ಸಂಪರ್ಕ ಹೊಂದಿರುವ ಮೃಗಾಯಲದ ಸಿಬ್ಬಂದಿಗಳು ಪ್ರಾಣಿ ಕಡಿತದಿಂದ ಉಂಟಾಗುವ ರೇಬೀಸ್ ಕಾಯಿಲೆಗೆ ತುತ್ತಾಗದಂತೆ ನೋಡಿಕೊಳ್ಳುವುದು ನಮ್ಮ ಕರ್ತವ್ಯ, ಈ ದಿನ ನಿಮ್ಮಲ್ಲರಿಗೂ ಉಚಿತವಾಗಿ ಕ್ಷಯರೋಗ ರೋಗ ಪರೀಕ್ಷೆ, ಹೆಚ್.ಐ.ವಿ.ಪರೀಕ್ಷೆ, ಮಧುಮೇಹ, ರಕ್ತದೊತ್ತಡದ ಲಿವರ್ ಕಾರ್ಯಕ್ಷಮತೆ ಪರೀಕ್ಷೆ, ಸಣ್ಣಪುಟ್ಟ ಕಾಯಿಲೆಗಳ ಪರೀಕ್ಷೆ ನಡೆಸಲಾಗುತ್ತದೆ ಎಂದು ಹೇಳಿದರು.



ವಲಯ ಅರಣ್ಯಾಧಿಕಾರಿ ಐ.ಬಿ.ಅಕ್ಷತಾ ಮಾತನಾಡಿ, ಎಲ್ಲಾ ಸಿಬ್ಬಂದಿಗಳು ತಪ್ಪದೇ ನಿಮ್ಮ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಿ. ನೀವು ಕೆಲಸ ಮಾಡುವ ಜಾಗಕ್ಕೆ ಆರೋಗ್ಯ ಇಲಾಖೆ ವಿವಿಧ ತಂಡಗಳು ಬಂದಿದೆ ಸದುಪಯೋಗ ಪಡಿಸಿಕೊಳ್ಳಿ ಎಂದರು. ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ ಮಾತನಾಡಿ, ಸ್ವಚ್ಛ ಅಭ್ಯಾಸವನ್ನು ಮಾಡಿ ಅಂದರೆ ತಂಬಾಕು ಜಗಿಯುವುದು, ಧೂಮಪಾನ, ಮದ್ಯಪಾನ ಮಾಡುವ ಹವ್ಯಾಸವನ್ನು ಬಿಡಿ. ಕ್ಷಯರೋಗ ಇತರೆ ಶ್ವಾಸಕೋಶದ ಸೋಂಕಿಗೆ ತುತ್ತಾಗದಂತೆ ಸ್ವಚ್ಛ ನಡವಳಿಕೆಗಳನ್ನು ಕಾಪಾಡಿಕೊಳ್ಳಿ. ದೈಹಿಕ ಮಾನಸಿಕ ಆರೋಗ್ಯ ಪಡೆದುಕೊಳ್ಳಿ ಎಂದರು. ಕಾರ್ಯಕ್ರಮದಲ್ಲಿ 28 ಜನ ಸಿಬ್ಬಂದಿ ಅಧಿಕಾರಿಗಳಿಗೆ ರೇಬೀಸ್ ರೋಗ ನಿಯಂತ್ರಣಕ್ಕೆ ಮುಂಜಾಗ್ರತಾ ಲಸಿಕೆ ನೀಡಿ, ವಿವಿಧ ರೋಗಗಳ ತಪಾಸಣೆ ಮತ್ತು ಚಿಕಿತ್ಸೆ ನೀಡಲಾಯಿತು.

ಕ್ಷೇತ್ರ ಆರೋಗಶಿಕ್ಷಣಾಧಿಕಾರಿಗಳಾದ ಬಿ.ಮೈಗಪ್ಪ, ಜಾನಕಿ, ಸಂಚಾರಿ ಆರೋಗ್ಯ ಘಟಕದ ಡಾ.ಮಂಜರಿ, ತ್ರಿವೇಣಿ, ಲಕ್ಷ್ಮೀದೇವಿ, ಸಲ್ಮನ್ ಖಾನ್, ಶಂಕರಮೂರ್ತಿ, ಶ್ರೀ ನಿವಾಸ, ಕ್ಷಯರೋಗ ವಿಭಾಗದ ಮಾರುತಿ ,ನಾಗರಾಜ್ ಹೆಚ್.ಐ.ವಿ.ವಿಭಾಗದ ರವೀಂದ್ರ, ನಾಗರಾಜ್ ಉಪ ವಲಯ ಆರಣ್ಯಾಧಿಕಾರಿ ವೆಂಕಟೇಶ ನಾಯ್ಕ್ ಇತರರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ನಗರಂಗೆರೆ ಜೂಜಾಟ: 6400 ನಗದು ಹಣ, ಜೂಜುಕೋರರು ವಶ

» **ಚಳ್ಳಕೆರೆ**

ತಾಲ್ಲೂಕಿನ ನಗರಂಗೆರೆ ಗ್ರಾಮದ ಕೆರೆಯಂಗಳದಲ್ಲಿ ಜೂಜಾಟದಲ್ಲಿ ತೊಡಗಿದ್ದ ಬಳ್ಳಾರಿ ರಸ್ತೆ ನಿವಾಸಿ ಓಂಕಾರಪ್ಪ ಮತ್ತು ಇತರೆ ಇಬ್ಬರನ್ನು ವಶಕ್ಕೆ ಪಡೆದ ಪೊಲೀಸರು ಅವರಿಂದ ಜೂಜಾಟದ ಹಣ 6400 ವಶಪಡಿಸಿಕೊಂಡಿದ್ದಾರೆ. ಸಾರ್ವಜನಿಕ ಮಾಹಿತಿ ಅನುಸರಿಸಿ ಪೇದೆ ಕೆ.ಶಂಕರಣ್ಣ ಮತ್ತು ಠಾಣಾಧಿಕಾರಿ ಆರ್.ವೆಂಕಟೇಶ್ ಹಿರಿಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ ದಾಳಿ ನಡೆಸಿ ಹಣ ಹಾಗೂ ಆರೋಪಿಗಳನ್ನು ವಶಕ್ಕೆ ಪಡೆದಿದ್ದಾರೆ. ಚಳ್ಳಕೆರೆ ಪೊಲೀಸರು ಪ್ರಕರಣ ದಾಖಲಿಸಿದ್ಧಾರೆ.

### ಸೆ.26, 27ರಂದು ದಸರಾ ಕ್ರೀಡಾಕೂಟ

» **ಚಿತ್ರದುರ್ಗ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕರ್ನಾಟಕ ಕ್ರೀಡಾ ಪ್ರಾಧಿಕಾರ ಮತ್ತು ವಿವಿಧ ಕ್ರೀಡಾ ಸಂಸ್ಥೆಗಳ ಸಹಯೋಗದಲ್ಲಿ ಇದೇ ಸೆ.26 ಮತ್ತು 27 ರಂದು ಬೆಳಿಗ್ಗೆ ಬೆಳಿಗ್ಗೆ 9 ಗಂಟೆಯಿಚಿದ ಚಿತ್ರದುರ್ಗ ನಗರದ ಜಿಲ್ಲಾ ಕ್ರೀಡಾಂಗಣ (ಒನಕೆ ಓಬವ್ವ ಕ್ರೀಡಾಂಗಣ)ದಲ್ಲಿ 2024-25ನೇ ಸಾಲಿನ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟ ಆಯೋಜಿಸಲಾಗಿದೆ. ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟದಲ್ಲಿ ಭಾಗವಹಿಸುವವರು ಆಯಾ ತಾಲ್ಲೂಕಿನಲ್ಲಿ ನಡೆದ ಪ್ರಸಕ್ತ ಸಾಲಿನ ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟದಲ್ಲಿ ವಾಲಿಬಾಲ್, ಕಬಡ್ಡಿ, ಖೋಖೋ, ಫುಟ್ಬಾಲ್, ಥ್ರೋಬಾಲ್, ಕ್ರೀಡೆಗಳಲ್ಲಿ ಪ್ರಥಮ ಸ್ಥಾನ ಹಾಗೂ ಅಥ್ಲೆಟಿಕ್ಸ್‌ನ ವೈಯಕ್ತಿಕ ಮತ್ತು ಯೋಗ ಕ್ರೀಡೆಯಲ್ಲಿ ಪ್ರಥಮ ಮತ್ತು ದ್ವಿತೀಯ ಸ್ಥಾನ ಪಡೆದ ಕ್ರೀಡಾಪಟುಗಳು ಮಾತ್ರ ಜಿಲ್ಲಾ ಮಟ್ಟದ ಕ್ರೀಡೆಯಲ್ಲಿ ಭಾಗವಹಿಸಲು ಅರ್ಹರಾಗಿರುತ್ತಾರೆ. ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟದಲ್ಲಿ ಭಾಗವಹಿಸುವವರಿಗೆ ತಾಲ್ಲೂಕು ಕೇಂದ್ರದಿಂದ ಜಿಲ್ಲಾ ಕೇಂದ್ರ ಸ್ಥಾನಕ್ಕೆ ಹೋಗಿ ಬರುವ ಪ್ರಯಾಣ ಭತ್ಯೆ ಮತ್ತು ದಿನಭತ್ಯೆಯನ್ನು ನೀಡಲಾಗುವುದು. ಜಿಲ್ಲಾ ಕ್ರೀಡಾಕೂಟದಲ್ಲಿ ನೇರವಾಗಿ ಬಾಸ್ಕೆಟ್ ಬಾಲ್, ಕುಸ್ತಿ, ಬ್ಯಾಡ್ಮಿಂಟನ್, ಹಾಕಿ, ಹ್ಯಾಂಡ್ ಬಾಲ್, ಟೇಬಲ್ ಟೆನಿಸ್, ನೆಟ್‌ಬಾಲ್ ಮತ್ತು ಈಜು ಕ್ರೀಡೆಯಲ್ಲಿ ವಿಭಾಗ ಮಟ್ಟಕ್ಕೆ ಆಯ್ಕೆ ಮಾಡಲಾಗುವುದು. ನೇರವಾಗಿ ಜಿಲ್ಲಾ ಮಟ್ಟದಲ್ಲಿ ನಡೆಯುವ ಕ್ರೀಡೆಗಳಲ್ಲಿ ಭಾಗವಹಿಸುವವರಿಗೆ ಯಾವುದೇ ಪ್ರಯಾಣ ಮತ್ತು ದಿನಭತ್ಯೆ ನೀಡಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಕಚೇರಿಯ ದೂರವಾಣಿ ಸಂಖ್ಯೆ 08194-235635 ಗೆ ಸಂಪರ್ಕಿಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಪ್ರೋತ್ಸಾಹಧನಕ್ಕಾಗಿ ಅರ್ಜಿ ಆಹ್ವಾನ

» **ಚಿತ್ರದುರ್ಗ**

2024-25ನೇ ಸಾಲಿಗೆ ಬಿಎಸ್ಸಿ ನರ್ಸಿಂಗ್ ಮತ್ತು ಜಿಎನ್‌ಎಂ ನರ್ಸಿಂಗ್ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಕರ್ನಾಟಕ ರಾಜ್ಯದ ಅರ್ಹ ಅಲ್ಪಸಂಖ್ಯಾತರಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್ ಮತ್ತು ಪಾರ್ಸಿ ಸಮುದಾಯ ವಿದ್ಯಾರ್ಥಿಗಳಿಂದ ಪ್ರೋತ್ಸಾಹ ಧನಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ನವೆಂಬರ್ 10 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಅರ್ಜಿ ಸಲ್ಲಿಸಲು ಸೇವಾ ಸಿಂಧು ವೆಬ್‌ಸೈಟ್ https://sevasindhu.karnataka.gov.in/sevasindhu/departmentservices ನಲ್ಲಿ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಇರಬೇಕಾದ ಅರ್ಹತೆಗಳು: ವಿದ್ಯಾರ್ಥಿಗಳು ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು. ಕೋರ್ಸಿನ ಅವಧಿ-ಪೂರ್ಣಾವಧಿ. ವಿದ್ಯಾರ್ಥಿಯ ಕುಟುಂಬದ ವಾರ್ಷಿಕ ಒಟ್ಟು ಆದಾಯ 2.50ಲಕ್ಷ ಮೀರಿರಬಾರದು. ವಿದ್ಯಾರ್ಥಿಗಳನ್ನು ಅನುದಾನದ ಲಭ್ಯತೆಯನುಸಾರ ಮೆರಿಟ್ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು. ಈ ಯೋಜನೆಯಡಿ ಉತ್ತೇಜನ ಮೊತ್ತವನ್ನು ಪಡೆಯಲು ಪ್ರತಿ ಶೈಕ್ಷಣಿಕ ವರ್ಷದಲ್ಲಿ ಹೊಸ ಅರ್ಜಿಗಳನ್ನು ಸಲ್ಲಿಸಬೇಕು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ನೇರ ಸಂದರ್ಶನ

» **ಚಿತ್ರದುರ್ಗ**


ಚಿತ್ರದುರ್ಗ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ಇದೇ ಸೆ.26ರಂದು ಬೆಳಿಗ್ಗೆ 10.30 ರಿಂದ 3 ಗಂಟೆಯವರೆಗೆ ನೇರ ನೇಮಕಾತಿ ಸಂದರ್ಶನ ಹಮ್ಮಿಕೊಳ್ಳಲಾಗಿದೆ. ಈ ಮೇಳದಲ್ಲಿ 3ಕ್ಕೂ ಹೆಚ್ಚು ಖಾಸಗಿ ಕಂಪನಿಗಳು ತಮ್ಮ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸಲು ಎಸ್.ಎಸ್.ಎಲ್.ಸಿ, ಪಿಯುಸಿ, ಐಟಿಐ, ಡಿಪ್ಲೊಮಾ, ಯಾವುದೇ ಪದವಿ ಹೊಂದಿರುವ 18 ರಿಂದ 30 ವರ್ಷದೊಳಗಿನ ಪುರುಷ ಅಥವಾ ಮಹಿಳಾ ಅಭ್ಯರ್ಥಿಗಳನ್ನು ನೇರವಾಗಿ ಆಯ್ಕೆ ಮಾಡಿಕೊಳ್ಳುವ ಸಂಬಂಧ ಭಾಗವಹಿಸಲಿದ್ದು, ಅಭ್ಯರ್ಥಿಗಳು 5 ಪ್ರತಿ ಬಯೋಡಾಟಾ, ವಿದ್ಯಾರ್ಹತೆಯ ಪ್ರಮಾಣ ಪತ್ರಗಳು, ಫೋಟೋಸ್ ಸ್ಟೆರಿದಂತೆ ಅಗತ್ಯ ದಾಖಲೆಗಳೊಂದಿಗೆ ಭಾಗವಹಿಸಬೇಕು. ಹೆಚ್ಚಿನ ಮಾಹಿತಿಗಾಗಿ ನಗರದ ಸ್ಟೇಡಿಯಂ ರಸ್ತೆ, ಹಳೇ ವೈಶಾಲಿ ಗೇಟ್ ಹತ್ತಿರದ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಕಚೇರಿ ದೂರವಾಣಿ ಸಂಖ್ಯೆ 7022459064, 8105619020, 7019755147 ಗೆ ಸಂಪರ್ಕಿಸಬಹುದು.

# ಯಾದವಸಮುದಾಯ ಪ್ರಗತಿಪರ ಚಿಂತನೆಗಳನ್ನು ಅಳವಡಿಸಿಕೊಂಡು ಮುನ್ನಡೆಯಬೇಕು: ರಘುಮೂರ್ತಿ

» **ಚಳ್ಳಕೆರೆ**

ಇಡೀ ದೇಶವೇ ಅಭಿವೃದ್ಧಿ ಪಥದತ್ತ ಹೆಜ್ಜೆ ಇಡುತ್ತಿದೆ,ಇಂತಹಸಂದರ್ಭದಲ್ಲಿನೂರಾರು ವರ್ಷಗಳಿಂದ ಆಚರಣೆಯಲ್ಲಿರುವ ಗೊಡ್ಡು ಸಂಪ್ರದಾಯ, ಮೌಢ್ಯವನ್ನು ತೊರೆದು ಯಾದವ ಸಮುದಾಯ ಮುಂದೆ ಬರಬೇಕಿದೆ. ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನಿಸುವ ಮೂಲಕ ಈ ಸಮುದಾಯವೂ ಸಹ ಜಾಗೃತಗೊಂಡಿದೆ ಎಂಬುವುದು ಗುರುತಿಸುತ್ತಿದೆ. ದೇವರ ಮತ್ತು ದೈವದ ಮೇಲೆ ಅಪಾರಭಕ್ತಿ, ಶ್ರದ್ಧೆ ಇರುವ ಈ ಸಮುದಾಯ ಯಾರಿಗೂ ಕೆಡಕನ್ನು ಬಯಸದು ಎಂದು ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು,ಭಾನುವಾರನಗರದಯಾದವರ ಹಾಸ್ಟಲ್ ಆವರಣದಲ್ಲಿ ತಾಲ್ಲೂಕು ಗೊಲ್ಲ ನೌಕರರ ಸಂಘ ಮತ್ತು ಸಮುದಾಯದ ವಿವಿಧ ಸಂಘಟನೆಗಳ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಸಮುದಾಯದ ವಿದ್ಯಾರ್ಥಿಗಳಿಗೆ ಪ್ರತಿಭಾಪುರಸ್ಕಾರ ಮತ್ತು ನಿವೃತ್ತ ಯಾದವ ನೌಕರರಿಗೆ ಸನ್ಮಾನ ಕಾರ್ಯಕ್ರಮವನ್ನು ಜ್ಯೋತಿಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು. ಕಳೆದ ಹಲವಾರು ವರ್ಷಗಳಿಂದ ಈ ಸಮುದಾಯದ ಮುಖಂಡರೊಂದಿಗೆ ನಿಕಟ ಸಂಪರ್ಕವಿದೆ. ಸಮುದಾಯಕ್ಕೆ ಸಂಬಂಧಪಟ್ಟ ಯಾವುದೇ ಸಮಸ್ಯೆ ಇದ್ದರೂ ಅದನ್ನು ನಿವಾರಿಸಲು ಪ್ರಾಮಾಣಿಕ ಪ್ರಯತ್ನ ಮಾಡುವೆ. ಈ ಹಿಂದೆ ಯಾದವ ಸಮುದಾಯ ಭವನ ನಿರ್ಮಿಸುವ ಹಾಗೂ ದೊಡ್ಡೇರಿಯಲ್ಲಿ ಎರಡು ಎಕರೆ ಜಮೀನನ್ನು ಸಮುದಾಯಕ್ಕೆ ನೀಡುವ ಭರವಸೆ ನೀಡಿದ್ದೆ. ಈ ಎರಡೂ ಭರವಸೆ ಈಡೇರಿಸುವ



ನಿಟ್ಟಿನಲ್ಲಿ ಕಾರ್ಯೋನ್ಮುಖನಾಗಿದ್ದೇನೆ. ಯಾದವ ಸಮುದಾಯ ನನ್ನ ಮೇಲೆ ಅಪಾರವಾದ ಗೌರವ, ವಿಶ್ವಾಸವಿಟ್ಟಿದೆ ಇದನ್ನು ಉಳಿಸಿಕೊಳ್ಳಲು ನಾನು ಸಮರ್ಥನಾಗಿದ್ದೇನೆಂಬುವುದನ್ನು ತಮ್ಮ ಬೇಡಿಕೆ ಈಡೇರಿಸುವ ಮೂಲಕ ಸಾಬೀತು ಪಡಿಸುತ್ತೇನೆಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಗೊಲ್ಲನೌಕರರ ಸಂಘದ ಗೌರವಾಧ್ಯಕ್ಷ ಪ್ರೊ.ಮಂಜುನಾಥ, ಯಾದವ ಸಮುದಾಯದಲ್ಲೂ ಸಹ ವಿದ್ಯಾರ್ಥಿಗಳ ಪ್ರತಿಭೆಯಲ್ಲಿ ಕೊರತೆ ಇಲ್ಲ. ಪ್ರಸ್ತುತ ಈ ವರ್ಷ ಪ್ರತಿಭಾವಂತ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚುತ್ತಿದೆ. ಗೊಲ್ಲನೌಕರರ ಸಂಘ ವಿದ್ಯಾರ್ಥಿಗಳಿಗೆ ಆತ್ಮಸ್ಥೈರ್ಯ ತುಂಬಲು ಈ ಕಾರ್ಯವನ್ನು ನಿರಂತರ ಮಾಡುತ್ತಾ ಬಂದಿದೆ ಎಂದರು.

ವಿಶೇಷ ಉಪನ್ಯಾಸ ನೀಡಿದ ಬಳ್ಳಾರಿ ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಕೆಂಗೇಗೌಡ್ರು, ಯಾದವ ಸಮುದಾಯದ ವಿದ್ಯಾರ್ಥಿಗಳಿಗೆ ಪ್ರತಿಭಾಪುರಸ್ಕಾರದ ಮೂಲಕ ಅವರ ಪ್ರತಿಭೆಯನ್ನು ಇಡೀ ಸಮಾಜ ಅರಿಯುವಂತೆ ಮಾಡಲಾಗುತ್ತಿದೆ. ನಮ್ಮ ಸಮುದಾಯದ ಮೂಢ ಸಂಪ್ರದಾಯಗಳನ್ನು ಆಚರಿಸಿಕೊಂಡು ಬಂದರೂ ಸತ್ಯಮತ್ತು ಪ್ರಾಮಾಣಿಕತೆಯನ್ನು ಬಿಟ್ಟು ಎಂದೂ ಬದುಕಿಲ್ಲ. ಸದಾಕಾಲ ಭಗವಂತನನ್ನು ಪ್ರಾರ್ಥಿಸುವ ಈ ಸಮುದಾಯ ಮೂಲಕಸುಬುಗಳಿಂದಲೇ ಬದುಕುತ್ತಿದೆ. ಈ ಸಮುದಾಯ ಎಲ್ಲಾ ಕ್ಷೇತ್ರಗಳಲ್ಲೂ ಪ್ರಾತಿನಿತ್ಯ ಹಾಗೂ ಎಸ್ಟಿ ಮೀಸಲಾತಿ ಪಡೆಯಲು ಹೆಚ್ಚು ಸಂಘಟಿತರಾಗಬೇಕು ಎಂದರು.

ತಾಲ್ಲೂಕು ಗೊಲ್ಲ ನೌಕರರ ಸಂಘದ ಅಧ್ಯಕ್ಷ ಕೆ.ಎಸ್.ಶ್ರೀಕಾಂತ್ ಮಾತನಾಡಿ, ವಿದ್ಯಾರ್ಥಿಗಳ ಪ್ರತಿಭಾಪುರಸ್ಕಾರ ಮತ್ತು ನಿವೃತ್ತ ನೌಕರರ ಸನ್ಮಾನದ ಜೊತೆಗೆ ಈ ಬಾರಿ ಉನ್ನತ್ತ ಶಿಕ್ಷಣದಲ್ಲೂ ಸಹ ಪ್ರಗತಿಸಾಧಿಸಿದವರನ್ನು ಗೌರವಿಸಲಾಗಿದೆ. ಎಸ್‌ಎಸ್‌ಎಲ್‌ಸಿ, ಪಿಯುಸಿ, ಪದವಿಯನ್ನು ಹೆಚ್ಚು ಅಂಕ ಪಡೆದ 100ಕ್ಕೂ ಹೆಚ್ಚು ವಿದ್ಯಾರ್ಥಿಗಳನ್ನು ಸನ್ಮಾನಿಸಲಾಗಿದೆ. ವಿಶೇಷವಾಗಿ ಬಿಎಎಂಎಸ್-4 ಎಂಬಿಬಿಎಸ್-01, ಪಿಎಚ್‌ಡಿ-1, ಬಿಇ-4 ಹಾಗೂ ಇಬ್ಬರು ಇಂಜಿನಿಯರಿಂಗ್ ನೌಕರಿ ಪಡೆದವರನ್ನು ಕಾರ್ಯಕ್ರಮದಲ್ಲಿ ಸನ್ಮಾನಿಸಲಾಗಿದೆ. ಗೊಲ್ಲ ನೌಕರರ ಸಂಘ ಮುಂದಿನ ದಿನಗಳಲ್ಲೂ ಸಹ ಸಮುದಾಯದ ವಿದ್ಯಾರ್ಥಿಗಳಿಗೆ ನಿರಂತರ ಪ್ರೋತ್ಸಾಹ ನೀಡುತ್ತದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ತಾಲ್ಲೂಕು ಗೊಲ್ಲರ ಸಂಘದ ಅಧ್ಯಕ್ಷ ಟಿ.ರವಿಕುಮಾರ್ ಮಾತನಾಡಿ, ಯಾದವ ಸಮುದಾಯದ ಎಲ್ಲಾ ಕ್ಷೇತ್ರಗಳಲ್ಲೂ ಗುರುತಿಸಿಕೊಳ್ಳಲು ಆರಂಭಿಸಿದೆ. ಇಂದು ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸುವ ಜೊತೆಗೆ, ಇಂಜಿನಿಯರಿಂಗ್, ಎಂಬಿಬಿಎಸ್ ಪದವಿಪಡೆದವರನ್ನು ಅಭಿನಂದಿಸಿದೆ. ಸಮುದಾಯ ಮುಂದಿನ ದಿನಗಳಲ್ಲೂ ಸಮಾಜದ ಅಭಿವೃದ್ಧಿಗೆ ಹೆಜ್ಜೆ ಹಾಕಬೇಕಿದೆ. ಸಮುದಾಯವನ್ನು ಉತ್ತಮ ಮಾರ್ಗದಲ್ಲಿ ಕೊಂಡೊಯ್ಯುವ ಜವಾಬ್ದಾರಿ ಹಿರಿಯ ಮುಖಂಡರ ಮೇಲಿದೆ ಎಂದರು. ಕಾರ್ಯಕ್ರಮದಲ್ಲಿ ನಿವೃತ್ತ ಪ್ರಾಂಶುಪಾಲ ಬಿ.ವಿ.ಸಿರಿಯಣ್ಣ, ಹಟ್ಟಿರುದ್ರಪ್ಪ, ಗ್ಯಾರಂಟಿ ಸಮಿತಿತಾಲ್ಲೂಕುಅಧ್ಯಕ್ಷಗದ್ದಿಗೆತಿಪ್ಪೇಸ್ವಾಮಿ, ಪರಶುರಾಂಪುರಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶಶಿಧರ, ಮಹಿಳಾ ಸಂಘದ ಅಧ್ಯಕ್ಷೆ ಚಿತ್ರಾವತಿ, ಸಂಪತ್‌ಕುಮಾರ್, ಗುರುಪ್ರಸಾದ್, ಮಲ್ಲಿಕಾರ್ಜುನ್, ರಾಜಣ್ಣ, ಕೆ.ಮಂಜಪ್ಪ, ಡಾ.ಹನುಮಂತಪ್ಪ, ಕರಿಯಪ್ಪ, ಕಾರ್ಯಾಧ್ಯಕ್ಷ ವೆಂಕಟೇಶ್, ಉಪಾಧ್ಯಕ್ಷೆ ಜಯಮ್ಮ, ಬಾಲರಾಜು, ಕಾರ್ಯದರ್ಶಿ ಎಸ್.ನಾಗರಾಜ, ಹುಲಿಕುಂಟೆವೈ.ಕಾಂತರಾಜ್, ಎಚ್. ಮಹಲಿಂಗಪ್ಪ, ಈರಗಟ್ಟಪ್ಪ, ವೃಷಬೇಂದ್ರಪ್ಪ, ಶಿವಣ್ಣ, ರಾಜಣ್ಣ, ಮುರುಗೇಶಪ್ಪ, ಈರಣ್ಣ ಮುಂತಾದವರು ಇದ್ದರು.

# ಉಪ್ಪಾರ ಸಮುದಾಯ ಭವನ ನಿರ್ಮಾಣ ಮಾಡುವೆ: ಶಾಸಕ ಬಿ.ಜಿ. ಗೋವಿಂದಪ್ಪ

» **ಹೊಸದುರ್ಗ**

ಪಟ್ಟಣದಲ್ಲಿ ಉಪ್ಪಾರರ ಸಮುದಾಯ ಭವನ ನಿರ್ಮಾಣ ಹಾಗೂ ಲೇಪಾಕ್ಷಿ ವೃತ್ತ ನಿರ್ಮಾಣದ ಕಾರ್ಯವನ್ನು ಮಾಡುತ್ತೇವೆ. ಸಮಯ ನಿಗದಿ ಬೇಡ, ಸ್ವಲ್ಪ ತಡವಾಗಿಯಾದರೂ ಈ ಕೆಲಸಗಳನ್ನು ಮಾಡುತ್ತೇನೆ ಎಂದು ಶಾಸಕ ಬಿ.ಜಿ. ಗೋವಿಂದಪ್ಪ ಹೇಳಿದರು.

ಭಗೀರಥ ನೌಕರರ ಸಾಂಸ್ಕೃತಿಕ ಮತ್ತು ಕ್ಷೇಮಾಭಿವೃದ್ಧಿ ಸಂಘ, ತಾಲ್ಲೂಕು ಉಪ್ಪಾರ ಸಂಘದ ವತಿಯಿಂದ ಪಟ್ಟಣದ ಶ್ರೀದೇವಿ ಸಮುದಾಯ ಭವನದಲ್ಲಿ ಆಯೋಜಿಸಿದ್ದ 'ಪ್ರತಿಭಾ ಪುರಸ್ಕಾರ ಹಾಗೂ ನಿವೃತ್ತ ನೌಕರರಿಗೆ ಸನ್ಮಾನ ಸಮಾರಂಭ ' ಉದ್ಘಾಟಿಸಿ ಮಾತನಾಡಿದರು.

ಸಮಾಜದ ಬಡಮಕ್ಕಳಿಗೆ ವಿದ್ಯಾಭ್ಯಾಸ ನೀಡುವುದು ಪುಣ್ಯದ ಕಾರ್ಯ, ಇದನ್ನು ಪ್ರತಿಯೊಬ್ಬರೂ ರೂಢಿಸಿಕೊಳ್ಳಿ. ಸಮಾಜದ ಅಧ್ಯಕ್ಷ ಮತ್ತು ನೌಕರರ ಸಂಘದ ಅಧ್ಯಕ್ಷರು ಜೊತೆ ಜೊತೆಯಾಗಿ ಸಾಗಬೇಕು. ಆಗ ಮಾತ್ರ ಸಮಾಜದ ಅಭಿವೃದ್ಧಿ ಸಾಧ್ಯ ಎಂದು ಕಿವಿಮಾತು ಹೇಳಿದರು.

ಭಗೀರಥಗುರುಪೀಠದಪುರುಷೋತ್ತಮಾನಂದ ಪುರಿ ಸ್ವಾಮೀಜಿ ಮಾತನಾಡಿ, ವಿದ್ಯೆ ಜೊತೆಗೆ ಸಂಸ್ಕಾರ, ನೈತಿಕತೆ, ವಿನಯವನ್ನೂ ಸಹ ಕಲಿಯಬೇಕು. ವಿನಯವಿಲ್ಲದ ವಿದ್ಯೆ ರಾಕ್ಷಸ ಪ್ರವೃತ್ತಿಗೆ ಆಹ್ವಾನವಿದ್ದಂತೆ. ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಧೈರ್ಯಗುಂದದೆ ಆತ್ಮವಿಶ್ವಾಸದಿಂದ ಮುನ್ನಡೆಯಿರಿ ಎಂದರು.ಪಟ್ಟಣದಲ್ಲಿ ಸಭಾಭವನ ನಿರ್ಮಿಸಲು ಸ್ಥಳಾವಕಾಶದ ಕೊರತೆಯಿದೆ. ಹಾಗಾಗಿ ಸರ್ಕಾರದ ಅನುದಾನ ಬಳಸಿಕೊಂಡು ಶ್ರೀಮಠದ ಆವರಣದಲ್ಲಿ ಸಭಾಭವನ ನಿರ್ಮಾಣ ಸೇರಿದಂತೆ ಹಲವು ಅಭಿವೃದ್ಧಿ ಕಾರ್ಯಗಳನ್ನು



ನಡೆಯಿಸಬಹುದು ಎಂದರು.

ಗುಬ್ಬಿ ಬಿ.ಇ.ಓ ಎಂ.ಎಸ್. ನಟರಾಜ್ ಉಪನ್ಯಾಸ ನೀಡಿದರು. ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಹೆಚ್ ಬಿಲ್ಲಪ್ಪ. ಜಿಲ್ಲಾ ಉಪ್ಪಾರ ಸಮಾಜದ ನಿಖಟಪೂರ್ವ ಅಧ್ಯಕ್ಷ ಆರ್. ಮೂರ್ತಿಉಪ್ಪಾರ್, ಭಗೀರಥ ನೌಕರರ ಸಾಂಸ್ಕೃತಿಕ ಮತ್ತು ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಆರ್. ಲಕ್ಷ್ಮಯ್ಯ, ತಾಲ್ಲೂಕು ಉಪ್ಪಾರ ಸಂಘದ ಅಧ್ಯಕ್ಷ ಪಿ.ಕೆ. ಪರಪ್ಪ, ಕೆಪಿಸಿಸಿ ಸದಸ್ಯ ಎಂ.ಪಿ. ಶಂಕರ್, , ಸಾಹಿತಿ ಬ. ಮೈಲಾರಪ್ಪ, ಭಗೀರಥ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಮಲ್ಲಪ್ಪ, ವಕೀಲ ಮಂಜುನಾಥ್, ಅಧೀಕ್ಷಕ ಎಂಜಿನಿಯರ್ ಜಯಣ್ಣ, ಪುರಸಭೆ ಮುಖ್ಯಾಧಿಕಾರಿ ತಿಮ್ಮರಾಜು, ವಲಯ ಅರಣ್ಯಾಧಿಕಾರಿ ದಯಾನಂದ್, ಮುಖಂಡರುಗಳಾದ ಪಿ.ಕೆ.ತಿಪ್ಪೇಶ್, ಸೇರಿದಂತೆ ಸಮಾಜದ ಮುಖಂಡರಿದ್ದರು.

> ಈ ಹಿಂದೆ ಭಗೀರಥ ನೌಕರರ ಸಾಂಸ್ಕೃತಿಕ ಮತ್ತು ಕ್ಷೇಮಾಭಿವೃದ್ಧಿ ಸಂಘದ ಉದ್ಘಾಟನೆಗೆ ನಾನು ಬಂದಿದ್ದೆ ಅಂದಿನಿಂದ ಇಂದಿನವರೆಗೂ ಸಹಾ ಸಂಘಟನೆರ ಅತ್ಯುತ್ತಮವಾಗಿ ನಡೆಯುತ್ತಾ ಬಂದಿದೆ. ಶಾಸಕ ಬಿ.ಜಿ.ಗೋವಿಂದಪ್ಪನವರು ನಮ್ಮ ಸಮಾಜಕ್ಕೆ ಹೊಸದುರ್ಗದಲ್ಲಿ ಸಮುದಾಯ ಭವನ ನಿರ್ಮಾಣ ಮಾಡಲು ಒಪ್ಪಿಗೆ ಸೂಚಿಸಿರುವುದು ಸ್ವಾಗತಾರ್ಹ,ಅದೇ ರೀತಿ ಮುಂದಿನ ಕ್ಯಾಬಿನೆಟ್‌ನಲ್ಲಿ ನಮ್ಮ ಸಮಾಜದವರಿಗೆ ಸಚಿವ ಸ್ಥಾನ ಕೊಡಬೇಕು ಇದು ಸರ್ಕಾರಕ್ಕೆ ನನ್ನ ಒತ್ತಾಯವಾಗಿದೆ.
>
> » **ಆರ್.ಮೂರ್ತಿ, ನಿಖಟ ಪೂರ್ವ ಜಿಲ್ಲಾಧ್ಯಕ್ಷರು**

## ಸ್ವಚ್ಛತಾ ಹೀ ಸೇವಾ; ಚಳ್ಳಕೆರೆ ನಗರ ಸಂಪೂರ್ಣ ಸ್ವಚ್ಛತಾ ಭಾಗ್ಯ: ಗಣೇಶ್



» **ಚಳ್ಳಕೆರೆ**

ನಗರದ ಪ್ರದೇಶದಲ್ಲಿ ಸ್ವಚ್ಚತೆಯನ್ನು ಕಾಪಾಡುವ ಮೂಲಕ ಯಾವುದೇ ರೋಗ ವ್ಯಾಪಿಸದಂತೆ ನಗರಸಭೆ ಆಡಳಿತ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಲಿದ್ದು, ಸಾರ್ವಜನಿಕರ ಸದುಪಯೋಗಕ್ಕಾಗಿ ಈ ಸ್ವಚ್ಚತಾ ಸೇವಾ ಅಭಿಯಾನವನ್ನು ಹಂತ, ಹಂತವಾಗಿ ಹಮ್ಮಿಕೊಳ್ಳಲಾಗುತ್ತಿದೆ ಎಂದು ಹಿರಿಯ ಆರೋಗ್ಯ ನಿರೀಕ್ಷಕ ಗಣೇಶ್ ತಿಳಿಸಿದರು. ಅವರು, ವಾಲ್ಮೀಕಿ ವೃತ್ತದಲ್ಲಿ ಪೌರಾಯುಕ್ತ ಎಚ್.ಜಿ.ಜಗರೆಡ್ಡಿ ಅನುಪಸ್ಥಿತಿಯಲ್ಲಿ ವಿದ್ಯಾರ್ಥಿಗಳಿಗೆ ಆಯೋಜಿಸಿದ್ದ ಸ್ವಚ್ಚತಾ-ಹಿ-ಸೇವಾ ಜಾಗೃತಿ ಜಾಥಕ್ಕೆ ಚಾಲನೆ ನೀಡಿ ಮಾತನಾಡಿದರು. ನಗರಸಭೆ ಈಗಾಗಲೇ ಸೆ.14ರಿಂದ ಈ ಕಾರ್ಯಕ್ರಮ ಆಯೋಜಿಸಿದ್ದು ಅ.02ರವರೆಗೂ ನಡೆಯಲಿದೆ ಎಂದರು. ಆರೋಗ್ಯ ನಿರೀಕ್ಷಕಿ ಗೀತಾಕುಮಾರಿ ಮಾತನಾಡಿ, ಸೆ. 25ರಂದು ಪ್ರಾಥಮಿಕ ಶಾಲಾ ವಿದ್ಯಾರ್ಥಿಗಳಿಗೆ ಚಿತ್ರಕಲೆ ಸ್ಪರ್ಧೆ, ಸೆ.26ರಂದು ಪ್ರೌಢಶಾಲಾ ವಿದ್ಯಾರ್ಥಿಗಳಿಗಾಗಿ ರಸಪ್ರಶ್ನೆ ಸ್ಪರ್ಧೆ, ಸೆ.27ರಂದು ಪದವಿಪೂರ್ವವಿದ್ಯಾರ್ಥಿಗಳಿಗೆ ಪ್ರಬಂಧ ಸ್ಪರ್ಧೆಯನ್ನು ಸರ್ಕಾರಿ ನೌಕರರ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರಿಗಾಗಿ ನಗರಸಭೆ ಆವರಣದಲ್ಲಿ ಸೆ.26ರಂದು ತ್ಯಾಜ್ಯದಿಂದ ಕಲಾಕೃತಿ ರಚನೆ, ಸ್ವಚ್ಚತೆ ಅಂದೋಲನದ ಬಗ್ಗೆ ಸ್ವಯಂ ಚಿತ್ರೀಕರಿಸಿದ ವಿಡಿಯೋ ಪ್ರದರ್ಶನ ಕಾರ್ಯಕ್ರಮವಿದ್ದು ಸಾರ್ವಜನಿಕರು ಸಹಕಾರ ನೀಡುವಂತೆ ಮನವಿ ಮಾಡಿದ್ದಾರೆ.



**ಚಿತ್ರದುರ್ಗ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ಅಧ್ಯಕ್ಷರಾಗಿ ಇಂದು ನಡೆದ ಸಭೆಯಲ್ಲಿ ಆಯ್ಕೆಯಾಗಿರುವ ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಸುಧಾಕರ್ ರವರನ್ನು ಶಿವಣ್ಣ ಶುಭ ಕೋರಿದರು.**

## ಪ್ರಮುಖ ಸುದ್ದಿ

# ಮೃತರ ಕುಟುಂಬಕ್ಕೆ ಧೈರ್ಯ ತುಂಬಿದ ಶಾಸಕ ರಘುಮೂರ್ತಿ

» **ಚಿತ್ರದುರ್ಗ**

ಚಿತ್ರದುರ್ಗ ತಾಲೂಕಿನ ಬೊಮ್ಮಕ್ಕನಹಳ್ಳಿ ಗ್ರಾಮದಲ್ಲಿ ಜೋಡಿ ಕೊಲೆಯಾದ ಕುಟುಂಬಸ್ಥರನ್ನು ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ ಭೇಟಿ ಮಾಡಿ ಧೈರ್ಯ ತುಂಬಿದರು.

ಈ ಸಂದರ್ಭದಲ್ಲಿ ಮಾತನಾಡಿ ಬೊಮ್ಮಕ್ಕನಹಳ್ಳಿ ಗ್ರಾಮದಲ್ಲಿ ನಡೆದಿರುವ ಘಟನೆ ನನಗೆ ತುಂಬಾ ನೋವಿನ ಸಂಗತಿಯಾಗಿದೆ.ಇಂತಹ ಪ್ರಕರಣಗಳು ಯಾವ ಗ್ರಾಮದಲ್ಲಿ ನಡೆಯಬಾರದು ಎಂದರು.

ನನ್ನ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಬೊಮ್ಮಕ್ಕನಹಳ್ಳಿಯ ಹನುಮಂತಪ್ಪ ಹಾಗೂ ಆತನ ಪತ್ನಿ ತಿಪ್ಪಮ್ಮ ಕಷ್ಟಪಟ್ಟು ಜೀವನ ನಡೆಸುತ್ತಿದ್ದರು. ಅಂತಹ ಕಷ್ಟಪಟ್ಟು ಜೀವನ ಸಾಧಿಸುತ್ತಿದ್ದ ಕುಟುಂಬ ಗಂಡ ಹೆಂಡತಿಯನ್ನುಯಾರೇಕೊಲೆಮಾಡಿದ್ದರು ಸಹ ಶಿಕ್ಷೆಯಿಂದ ತಪ್ಪಿಸಿಕೊಳ್ಳಲು ಸಾಧ್ಯವಿಲ್ಲ. ಕೊಲೆಗೆ ಸಂಬಂಧಿಸಿದಂತೆ ಇಬ್ಬರನ್ನು ವಶಕ್ಕೆ ಪಡೆದಿದ್ದು ಇನ್ನೂ ಹೆಚ್ಚಿನ ತನಿಖೆ ಮೂಲಕ ಈ ಕೊಲೆಯಲ್ಲಿ



ಭಾಗಿಯಾಗಿರುವ ಎಲ್ಲಾರನ್ನೂ ಬಂಧಿಸುತ್ತಾರೆ. ಅದರಲ್ಲಿ ಎರಡು ಮಾತಿಲ್ಲ. ಕಾನೂನು ಎಲ್ಲಾರಿಗೂ ಒಂದೇ ಆಗಿದೆ. ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಜೊತೆ ಸಹ ಮಾತನಾಡಿದ್ದು ಕಾನೂನು ರೀತಿಯ ಎಲ್ಲಾ ರೀತಿಯ ಸಿದ್ಧತೆ ಪೋಲಿಸ್ ಇಲಾಖೆ ಮಾಡಿಕೊಂಡು ಹುಡುಕಾಟ ನಡೆಸುತ್ತಿದ್ದು ಕುಟುಂಬಕ್ಕೆ ನ್ಯಾಯ ಒದಗಿಸಲಾಗುತ್ತದೆ.

**ಸರ್ಕಾರಿ ಸೌಲಭ್ಯದ ಭರವಸೆ:** ದಂಪತಿಗೆ ಇಬ್ಬರು ಹೆಣ್ಣು ಮಕ್ಕಳಿದ್ದು ಹಿರಿಯ ಪುತ್ರಿಗೆ ಮದುವೆ ಮಾಡಿ ಬೊಮ್ಮಕ್ಕನಹಳ್ಳಿಗೆ ನೀಡಿದ್ದರು. ಕುಟುಂಬ ಸಮಸ್ಯೆಯಿಂದ ಮದುವೆ ಮಾಡಿಕೊಟ್ಟಿದ್ದ ಅರ್ಷಿತಾ ಸಹ ಗಂಡನ ಕಿರುಕುಳದಿಂದ ತವರು ಮನೆಗೆ ಬಂದಿದ್ದಳು ಎಂದು ಹೇಳುತ್ತಿದ್ದು ಆ ಹೆಣ್ಣು ಮಗಳಿಗೆ ತಾತ್ಕಾಲಿಕ ಉದ್ಯೋಗ ಮತ್ತು ಮಹಿಳಾ ಮಕ್ಕಳ ಕಲ್ಯಾಣ ಇಲಾಖೆಯಲ್ಲಿನ ಸೌಲಭ್ಯ ಒದಗಿಸುವ ಕೆಲಸ ಮಾಡಲಾಗುತ್ತದೆ. ಕಿರಿಯ ಪುತ್ರಿ ಸಹ ಎ□□□□□□ಲ್ ಸಿ ಅಧ್ಯಯನ ಮಾಡುತ್ತಿದ್ದ ಅ ಹುಡುಗಿಗೆ ವಿದ್ಯಾಭ್ಯಾಸಕ್ಕೆ ತೊಂದರೆ ಆಗದಂತೆ ಸಹಾಯ ಮಾಡುತ್ತೇನೆ ಎಂದು ತಿಳಿಸಿದರು.

**ಸಮಸ್ಯೆಯನ್ನು ಕಾನೂನು ಮೂಲಕ ಬಗೆಹರಿಸಿಕೊಳ್ಳಿ:** ಸಾರ್ವಜನಿಕರು ಯಾವುದೇ ಸಮಸ್ಯೆಗಳನ್ನು ಕಾನೂನು ಮೂಲಕ ಬಗೆಹರಿಸಿಕೊಳ್ಳಬೇಕು. ಗ್ರಾಮಗಳಲ್ಲಿ ಸೌಹಾರ್ದ ಬದುಕು ನಡೆಸಬೇಕು. ಕೊಲೆ ಮಾಡುವ ಹಂತಕ್ಕೆ ಯಾರು ಸಹ ತೆರಳಬಾರದು. ಸಮಸ್ಯೆಗಳಿಗಾಗಿ ದ್ವೇಷ ಪರಿಹಾರವಲ್ಲ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಮಾಜಿ ಜಿ.ಪಂ.ಸದಸ್ಯ ಬಾಬುರೆಡ್ಡಿ, ಮುಖಂಡರುಗಳಾದ ಸುಭಾಸ್ ರೆಡ್ಡಿ, ಉಮೇಶ್, ಗೋಪಾಲರೆಡ್ಡಿ, ಜಯಣ್ಣ, ಮಲ್ಲಿಕಾರ್ಜುನ ಮತ್ತು ಗ್ರಾಮಸ್ಥರು ಇದ್ದರು.

## ಫಾಸ್ಟ್ ನ್ಯೂಸ್

### ವಿವಿಧ ಹುದ್ದೆಗಳಿಗೆ ಅರ್ಜಿ ಆಹ್ವಾನ

» **ಚಿತ್ರದುರ್ಗ**

ಕೇಂದ್ರ ಸರ್ಕಾರದ ಸಿಬ್ಬಂದಿ ನೇಮಕಾತಿ ಆಯೋಗವು ಕೇಂದ್ರ ಸಶಸ್ತ್ರ ಪೊಲೀಸ್, ಎಸ್‌ಎಸ್‌ಎಫ್ ಪಡೆಗಳಲ್ಲಿ ಕಾನ್‌ಸ್ಟೇಬಲ್(ಜಿಡಿ) ಮತ್ತು ಅಸ್ಸಾಂ ರೈಫಲ್ಸ್‌ನಲ್ಲಿ ರೈಫಲ್ ಮ್ಯಾನ್(ಜಿಡಿ) ಹುದ್ದೆಗಳ ನೇಮಕಾತಿಗಾಗಿ ಮುಕ್ತ ಸ್ಪರ್ಧಾತ್ಮಕ ಕಂಪ್ಯೂಟರ್ ಆಧಾರಿತ ಪರೀಕ್ಷೆಗೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಅ.14 ಕೊನೆಯ ದಿನವಾಗಿದೆ. ಅರ್ಜಿ ಸಲ್ಲಿಸಲು ಅರ್ಹ ಅಭ್ಯರ್ಥಿಗಳು ಮಾನ್ಯತೆ ಪಡೆದ ಮಂಡಳಿಯಿಂದ 10ನೇ ತರಗತಿ ಪರೀಕ್ಷೆಯಲ್ಲಿ ಅಥವಾ ತತ್ಸಮಾನ ವಿದ್ಯಾರ್ಹತೆಯಲ್ಲಿ ಉತ್ತೀರ್ಣರಾಗಿರಬೇಕು. 18-23 ವರ್ಷ ವಯೋಮಿತಿ ಹೊಂದಿರಬೇಕು. ಎಸ್.ಸಿ, ಎಸ್.ಟಿ, ಒಬಿಸಿ, ಇಎಸ್‌ಎಂ ಇತರ ನಿರ್ದಿಷ್ಟ ವರ್ಗಗಳಿಗೆ ವಯೋಮಿತಿಸಡಿಲಿಕೆ ಇರುತ್ತದೆ. ಪರೀಕ್ಷೆಯ ಸಂಭವನೀಯ ದಿನಾಂಕ 2025ರ ಜನವರಿ-ಫೆಬ್ರವರಿ. ಪರೀಕ್ಷೆಯ ನಿಖರ ದಿನಾಂಕವನ್ನು ಎಸ್‌ಎಸ್‌ಸಿ ವೆಬ್‌ಸೈಟ್ ಮೂಲಕ ತಿಳಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಸಿಬ್ಬಂದಿ ಆಯೋಗದ ನೇಮಕಾತಿ ವೆಬ್‌ಸೈಟ್ www.ssckkr.kar.nic.in/ https://ssc.nic.in ಗೆ ಬೇಟಿ ನೀಡಬಹುದು. ಸಿಬ್ಬಂದಿ ಆಯೋಗದ ದೂರವಾಣಿ ಸಂಖ್ಯೆ: 080-25502520, ಚಿತ್ರದುರ್ಗ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಕಚೇರಿಯ ದೂರವಾಣಿ ಸಂಖ್ಯೆ 9945587060, 7022459064 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

### ವಿದ್ಯಾರ್ಥಿವೇತನಕ್ಕೆ ಅರ್ಜಿ ಆಹ್ವಾನ

» **ಚಿತ್ರದುರ್ಗ**

2024-25ನೇ ಸಾಲಿಗೆ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಅಭಿಯಾನ ಕೈಗೊಳ್ಳಲಾಗಿದ್ದು, ಜಿಲ್ಲೆಯ ಎಲ್ಲಾ ಅರ್ಹ ಪರಿಶಿಷ್ಟ ಜಾತಿ ಮೆಟ್ರಿಕ್ ಪೂರ್ವ ಹಾಗೂ ನಂತರದ ವಿದ್ಯಾರ್ಥಿಗಳು ಅರ್ಜಿಗಳನ್ನು ಇಲಾಖೆ ವೆಬ್‌ಸೈಟ್ ರಾಜ್ಯ ವಿದ್ಯಾರ್ಥಿವೇತನ ಪೋರ್ಟಲ್‌ನಲ್ಲಿ ಕಾಲಾವಕಾಶ ಕಲ್ಪಿಸಲಾಗಿದ್ದು, ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಕೋರಿದೆ. 2024-25ನೇ ಸಾಲಿನಿಂದ ಕೇಂದ್ರ ಪುರಸ್ಕೃತ ವಿದ್ಯಾರ್ಥಿವೇತನ ಕಾರ್ಯಕ್ರಮಗಳಿಗೆ ಆಧಾರ್ ಬಯೋಮೆಟ್ರಿಕ್ ಅಥೆಂಟಿಕೇಷನ್ ಮತ್ತು ಇಕೆವೈಸಿ ಕಡ್ಡಾಯವಾಗಿದೆ. ಈ ಸಂಬಂಧ ರಾಜ್ಯಾದ್ಯಂತ ಕಾರ್ಯನಿರ್ವಹಿಸುತ್ತಿರುವ ಗ್ರಾಮ ಒನ್, ಬೆಂಗಳೂರು ಒನ್ ಹಾಗೂ ಕರ್ನಾಟಕ ಒನ್ ಕೇಂದ್ರಗಳಲ್ಲಿ ಈ ಪ್ರಕ್ರಿಯೆಯನ್ನು ಉಚಿತವಾಗಿ ಕೈಗೊಳ್ಳಲು ಕೇಂದ್ರ ಕಚೇರಿಯಿಂದ ಆದೇಶಿಸಿರುತ್ತಾರೆ. ಅದರಂತೆ ಎಲ್ಲಾ ಅರ್ಹ ಫಲಾನುಭವಿಗಳು ಕೇಂದ್ರಗಳಿಗೆ ಭೇಟಿ ನೀಡಿ ಸಕಾಲದಲ್ಲಿ ಬಯೋಮೆಟ್ರಿಕ್ ಅಥೆಂಟಿಕೇಷನ್ ಅಂಡ್ ಇಕೆವೈಸಿ ಪ್ರಕ್ರಿಯೆಗೆ ನೊಂದಣಿ ಮಾಡಿಸಲು ಕೋರಿದೆ. ಜಿಲ್ಲೆಯ ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯಡಿ ಕಾರ್ಯನಿರ್ವಹಿಸುತ್ತಿರುವ ಜಿಲ್ಲೆಯ ಸಹಾಯಕ ನಿರ್ದೇಶಕ ಕಚೇರಿ ಹಾಗೂ ವಿದ್ಯಾರ್ಥಿನಿಲಯಗಳಲ್ಲಿ ವಿದ್ಯಾರ್ಥಿಗಳಿಂದ ಅರ್ಜಿ ಪಡೆಯಲು ಹಾಗೂ ಇಕೆವೈಸಿ ಮಾಡಲು ಫೆಸಿಲಿಟೇಷನ್ ಕೇಂದ್ರಗಳನ್ನು ಆರಂಭಿಸಲಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ ತಿಳಿಸಿದ್ದಾರೆ.

### ಟಿಎಪಿಸಿಎಂಎಸ್ ನೂತನ ಆಡಳಿತ ಕಚೇರಿ ಉದ್ಘಾಟನೆ ಸೆ.25ರಂದು

» **ಚಿತ್ರದುರ್ಗ**

ಚಿತ್ರದುರ್ಗ ತಾಲ್ಲೂಕು ವ್ಯವಸಾಯೋತ್ಪನ್ನಗಳ ಮಾರಾಟ ಸಹಕಾರ ಸಂಘದ ವತಿಯಿಂದ ಇದೇ ಸೆ.25ರಂದು ಬೆಳಿಗ್ಗೆ 11.30ಕ್ಕೆ ನಗರದ ಎಪಿಎಂಸಿ "ಸಿ" ಬ್ಲಾಕ್ ಆವರಣದ ನೂತನ ಆಡಳಿತ ಕಚೇರಿಯ ಮುಂಭಾಗದಲ್ಲಿ "75ನೇ ವರ್ಷದ ಅಮೃತ ಮಹೋತ್ಸವದ ಸವಿ ನೆನಪಿಗಾಗಿ ನೂತನವಾಗಿ ನಿರ್ಮಿಸಿರುವ ಟಿಎಪಿಸಿಎಂಎಸ್ ಆಡಳಿತ ಕಚೇರಿಯ" ಉದ್ಘಾಟನಾ ಸಮಾರಂಭ ಹಮ್ಮಿಕೊಳ್ಳಲಾಗಿದೆ.ಸಂಸದ ಗೋವಿಂದ ಎಂ ಕಾರಜೋಳ ಘನ ಉಪಸ್ಥಿತಿ ವಹಿಸುವರು. ಸಹಕಾರ ಸಚಿವ ಕೆ.ಎನ್.ರಾಜಣ್ಣ ನೂತನ ಕಚೇರಿ ಉದ್ಘಾಟಿಸುವರು. ಯೋಜನೆ ಮತ್ತು ಸಾಂಖ್ಯಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಕಾರ್ಯಕ್ರಮ ಉದ್ಘಾಟಿಸುವರು. ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರ (ಪಪ್ಪಿ) ಸ್ಮರಣ ಸಂಚಿಕೆ ಬಿಡುಗಡೆ ಮಾಡಲಿದ್ದಾರೆ. ಟಿ.ಎ.ಪಿ.ಸಿ.ಎಂ.ಎಸ್ ಅಧ್ಯಕ್ಷ ಹೆಚ್.ಎಂ.ಮಂಜುನಾಥಪ್ಪ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.ಮುಖ್ಯ ಅತಿಥಿಗಳಾಗಿ ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ, ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ, ವಿಧಾನ ಪರಿಷತ್ ಸದಸ್ಯ ಕೆ.ಎಸ್.ನವೀನ್, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳಿ ಉಪಾಧ್ಯಕ್ಷ ಶಿವಕುಮಾರಗೌಡ ಪಾಟೀಲ, ನಿರ್ದೇಶಕರಾದ ಎಸ್.ಆರ್.ಗಿರೀಶ್, ಎಸ್.ಜೆ.ಹನುಮಂತರಾಯ, ಕೆ.ಎಸ್.ಸುರೇಶ್, ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷ ಹೆಚ್.ಎಂ.ದ್ಯಾಮಣ್ಣ ಹಾಗೂ ವಿಶೇಷ ಆಹ್ವಾನಿತರಾಗಿ ಕರ್ನಾಟಕ ರಾಜ್ಯ ಅಹಕಾರ ಸಂಘಗಳ ನಿಬಂಧಕ ಕ್ಯಾಪ್ಟನ್ ಡಾ.ಕೆ.ರಾಜೇಂದ್ರ, ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಸ್.ಜೆ.ಸೋಮಶೇಖರ್, ಎಸ್ಪಿ ರಂಜಿತ್ ಕುಮಾರ್ ಬಂಡಾರು ಭಾಗವಹಿಸಲಿದ್ದಾರೆ.

# ಕೂಡಲಸಂಗಮೇಶ್ವರ ದೇವಸ್ಥಾನ ಪ್ರವಾಸೋದ್ಯಮ ಇಲಾಖೆ ವ್ಯಾಪ್ತಿಗೆ; ಜಿಲ್ಲಾಧಿಕಾರಿ ಟಿ.ವೆಂಕಟೇಶ್

» **ಚಳ್ಳಕೆರೆ**





ತಾಲ್ಲೂಕಿನ ಪರಶುರಾಮಪುರ ಹೋಬಳಿಯ ಜಾಜೂರು ಗ್ರಾಮ ಪಂಚಾಯಿತಿವ್ಯಾಪ್ತಿಯನಾಗಗೊಂಡನಹಳ್ಳಿ ವೇದಾವತಿ ನದಿಯ ಮಧ್ಯಭಾಗದಲ್ಲಿರುವ ಪ್ರಾಚೀನಕಾಲದ ದೇವಸ್ಥಾನಗಳಲ್ಲಿ ಒಂದಾದ ಶ್ರೀಕೂಡಲಸಂಗಮೇಶ್ವರಸ್ವಾಮಿ ಸನ್ನಿಧಿಯನ್ನು ಪ್ರವಾಸಿತಾಣವನ್ನಾಗಿ ಮಾಡಬೇಕೆನ್ನುವ ಈ ಭಾಗದ ಭಕ್ತರ ಅಪೇಕ್ಷೆ ಹಾಗೂ ಶಾಸಕರ ಅಭಿಲಾಷೆಯಂತೆ ಪ್ರವಾಸಿ ಕೇಂದ್ರವನ್ನಾಗಿ ಮಾಡಲು ಸರ್ಕಾರಕ್ಕೆ ಶಿಫಾರಸ್ಸು ಮಾಡುವ ಭರವಸೆಯನ್ನು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ನೀಡಿದರು.

ನಾಗಗೊಂಡನಹಳ್ಳಿಯ ಬ್ಯಾರೇಜ್ ಪ್ರದೇಶಕ್ಕೆ ಭೇಟಿ ನೀಡಿ ಕ್ಷೇತ್ರದ ಶಾಸಕ ಟಿ.ರಘುಮೂರ್ತಿ, ಅಧಿಕಾರಿಗಳು ಹಾಗೂ ಗ್ರಾಮಸ್ಥರೊಂದಿಗೆ ಸೇರಿ ಬಾಗಿನ ಅರ್ಪಿಸಿದ ನಂತರ ದೇವಸ್ಥಾನದ ಆಡಳಿತ ಮಂಡಳಿ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಈಗಾಗಲೇ ನಾಗಗೊಂಡನಹಳ್ಳಿಗೆ ಹೊಂದಿಕೊಂಡಂತೆ ಶ್ರೀಚಲುಮೆರುದ್ರಸ್ವಾಮಿ ಮಠವಿದ್ದು, ಅದಕ್ಕೆ ಕೆಲವೇ ದೂರದಲ್ಲಿ ಶ್ರೀಕೂಡಲಸಂಗಮೇಶ್ವರಸ್ವಾಮಿ ಸನ್ನಿಧಿ ಇದೆ. ಇದನ್ನು ಪ್ರವಾಸಿಕೇಂದ್ರವನ್ನಾಗಿ ಗುರುತಿಸಿದರೆ ಇನ್ನೂ ಹೆಚ್ಚಿನ ಅಭಿವೃದ್ದಿಯನ್ನು ಕಾಣಬಹುದು. ಆಗಮಿಸುವ ಭಕ್ತರಿಗೂ ಸೌಲಭ್ಯ ಕಲ್ಪಿಸಿದಂತಾಗುತ್ತದೆ ಎಂದರು.

ರಾಜ್ಯ ರೈತ ಸಂಘದ ಹಿರಿಯ ಉಪಾಧ್ಯಕ್ಷ ಕೆ.ಪಿ.ಭೂತಯ್ಯ ಮಾತನಾಡಿ, ಕಳೆದ ಎರಡು ತಿಂಗಳ ಹಿಂದೆ ಶಾಸಕರು ಹಾಗೂ ಜಿಲ್ಲಾಧಿಕಾರಿಗಳಿಗೆ ಈ ಕ್ಷೇತ್ರವನ್ನು ಪ್ರವಾಸೋದ್ಯಮ ಕೇಂದ್ರ ಮಾಡುವಂತೆ ಮನವಿ ಮಾಡಿಕೊಂಡಿದ್ದೆ.

ಪುರಾತನ ಕಾಲದ ಈ ದೇವಸ್ಥಾನ ವೇದಾವತಿ ನದಿಯ ತಡದಲ್ಲಿದ್ದು, ಪ್ರತಿವರ್ಷ ರಾಜ್ಯದ ನಾನಾಕಡೆಯಿಂದ ಭಕ್ತರು ಆಗಮಿಸುತ್ತಾರೆ. ದೇವಸ್ಥಾನಕ್ಕೆ ಕಾಂಪೌಂಡ್, ಸಮುದಾಯ ಭವನ ನಿರ್ಮಾಣವೂ ಸೇರಿದಂತೆ ಎಲ್ಲಾ ಮೂಲಭೂತ ಸೌಕರ್ಯ ಒದಗಿಸುವಂತೆ ಮನವಿ ಮಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ದಿ ಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ಮಾತನಾಡಿ, ಜಿಲ್ಲಾಧಿಕಾರಿಗಳು ಈ ಕ್ಷೇತ್ರದ ಸರ್ವತೋಮುಖ ಅಭಿವೃದ್ದಿಯ ಬಗ್ಗೆ ಈಗಾಗಲೇ ಸಾಕಷ್ಟು ಮಾಹಿತಿ ನೀಡಿ, ಸರ್ಕಾರಕ್ಕೆ ಶಿಫಾರಸ್ಸು ಮಾಡುವ ಭರವಸೆ ನೀಡಿದ್ದಾರೆ. ಶ್ರೀಕೂಡಲಸಂಗಮೇಶ್ವರ ದೇವಸ್ಥಾನವನ್ನು ಅಭಿವೃದ್ದಿ ಪಡಿಸುವ ಪುಣ್ಯಕಾರ್ಯನನ್ನಪಾಲಿಗೆಬಂದಿರುವುದು ಹೆಮ್ಮೆ ತಂದಿದೆ. ಶಾಸಕರ ಅನುದಾನದಲ್ಲಿ 10 ಲಕ್ಷ ಹಣವನ್ನು ಬಿಡುಗಡೆಗೊಳಿಸಿ ಸಮುದಾಯ ಭವನ ನಿರ್ಮಾಣವೂ ಸೇರಿದಂತೆ ಮೂಲಭೂತ ಸೌಕರ್ಯ ಒದಗಿಸಲಾಗುವುದು. ಪ್ರವಾಸೋದ್ಯಮ ಇಲಾಖೆ ಅಧಿಕಾರಿಗಳು ಸಹ ನಮ್ಮ ಮನವಿಯನ್ನು ಈಗಾಗಲೇ ಪುರಸ್ಕರಿಸಿ ಅವರು ಸರ್ಕಾರಕ್ಕೆ ವರದಿ ಸಿದ್ದಪಡಿಸಿ ಕಳಿಸುವರು. ಈಗಾಗಲೇ ಕ್ಷೇತ್ರದಲ್ಲಿ ಹಲವಾರು ಅಭಿವೃದ್ದಿ ಕಾರ್ಯಕ್ರಮಗಳನ್ನು ಕೈಗೊಂಡಿದ್ದು, ಮುಂದಿನ ದಿನಗಳಲ್ಲೂ ಸಹ ಇದು ಮುಂದುವರೆಯಲಿದೆ. ವಿಶೇಷವಾಗಿ ಕೂಡಲಸಂಗಮೇಶ್ವರ ದೇವಸ್ಥಾನದ ಸರ್ವತೋಮುಖ ಅಭಿವೃದ್ದಿಗೆ ಎಲ್ಲಾ ಸಹಕಾರ ನೀಡಲು ನಾನು ಸಿದ್ದನಿದ್ದೇನೆ. ಕೂಡಲಸಂಗಮೇಶ್ವರ ದೇವಸ್ಥಾನ ಎಲ್ಲಾ ಭಕ್ತರ ಅಭಿಲಾಷೆ, ಅನಿಸಿಕೆಯಂತೆ ಪ್ರವಾಸೋದ್ಯಮ ಕೇಂದ್ರವನ್ನಾಗಿಸಲು ಪ್ರಾಮಾಣಿಕ ಪ್ರಯತ್ನವನ್ನು ಮಾಡುವ ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸೋಮಶೇಖರ್, ಪ್ರವಾಸೋದ್ಯಮ ಇಲಾಖೆ ಉಪನಿರ್ದೇಶಕ ಶಶಿಕುಮಾರ್, ತಹಶೀಲ್ದಾರ್ ರೇಹಾನ್‌ಪಾಷ, ಇಒ ಎಸ್.ಶಶಿಧರ, ಗ್ರಾಮ ಪಂಚಾಯಿತಿ ಅಧ್ಯಕ್ಷೆ ಲೋಕಮ್ಮ, ಉಪಾಧ್ಯಕ್ಷೆ ಪ್ರೇಮ, ಸದಸ್ಯರಾದ ರಂಗನಾಥ, ಹೇಮಂತರಾಜ, ಜಿಲ್ಲಾ ಪಂಚಾಯಿತಿ ಕೆಡಿಪಿ ಸದಸ್ಯ ಓ.ರಂಗಸ್ವಾಮಿ, ರೈತ ಮುಖಂಡ ನಾಗರಾಜು, ಮಂಜುನಾಥ, ಚಲ್ಮೇಶ್, ಓಬಳೇಶ್, ರಂಗಪ್ಪ, ತಿಪ್ಪೇಸ್ವಾಮಿ, ಪಿಡಿಒ ಓಬಣ್ಣ, ಕಂದಾಯಾಧಿಕಾರಿ ರಾಜೇಶ್ ಮುಂತಾದವರು ಉಪಸ್ಥಿತರಿದ್ದರು.

# ಬಾಲ್ಯವಿವಾಹ ತಡೆಗಟ್ಟುವಲ್ಲಿ ಶಿಕ್ಷಕರ ಪಾತ್ರ ಮಹತ್ವವಾದದ್ದು: ಯೋಜನಾಧಿಕಾ ವೀಣಾ

» **ಚಿತ್ರದುರ್ಗ**



ಬಾಲ್ಯವಿವಾಹ ತಡೆಗಟ್ಟುವಲ್ಲಿ ಶಿಕ್ಷಕರ ಪಾತ್ರ ಮಹತ್ವವಾದದ್ದು ಎಂದು ಶಿಶು ಅಭಿವೃದ್ಧಿ ಯೋಜನಾಧಿಕಾರಿ ಎಂ.ವಿ.ವೀಣಾ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ತಾಲೂಕು ಆಡಳಿತ, ತಾಲೂಕು ಪಂಚಾಯಿತ್, ನಗರಸಭೆ ಹಾಗೂ ಶಿಶು ಅಭಿವೃದ್ಧಿ ಯೋಜನೆ ಚಿತ್ರದುರ್ಗ ಇವರ ಸಂಯುಕ್ತ ಆಶ್ರಯದಲ್ಲಿ ನಗರದ ಬಾಪೂಜಿ ಬಾಲಕರ ಹಾಗೂ ಬಾಲಕಿಯರ ಪ್ರೌಢಶಾಲೆ ಸಭಾಂಗಣದಲ್ಲಿ ಶನಿವಾರ ಹಮ್ಮಿಕೊಂಡಿದ್ದ ಬಾಲ್ಯವಿವಾಹ ನಿಷೇಧ ಅರಿವು ಕಾರ್ಯಕ್ರಮ ಹಾಗೂ ಪೋಷಣ್ ಮಾಸಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಬಾಲ್ಯ ವಿವಾಹ ಶಿಕ್ಷಾರ್ಹ ಅಪರಾಧವಾಗಿದೆ. ಬಾಲ್ಯವಿವಾಹ ಪ್ರಕರಣ ಹಾಗೂ ಈ ರೀತಿಯ ಮದುವೆ ಪ್ರಯತ್ನಗಳು ಕಂಡುಬಂದಲ್ಲಿ ಕಾನೂನು ರೀತಿ ಶಿಕ್ಷೆಗೆ ಹಾಗೂ ದಂಡಕ್ಕೆ ಒಳಪಡಿಸಲಾಗುವುದು ಎಂದು ಹೇಳಿದರು.

ಸಹಾಯಕ ಶಿಶು ಅಭಿವೃದ್ಧಿ ಯೋಜನಧಿಕಾರಿ ಮಂಜುಳಾ ಪೋಷನ್ ಮಾಸಾಚರಣೆ ಕುರಿತು ಮಾತನಾಡಿ, ಕಿಶೋರಿಯರಿಗೆ ಅಗತ್ಯ ಇರುವ ಪೋಷಕಾಂಶಗಳ ಬಗ್ಗೆ, ಅವರ ಸಧೃಡ ಭವಿಷ್ಯಕ್ಕಾಗಿ ಆರೋಗ್ಯ ಪದ್ಧತಿಯ ಮಹತ್ವದ ಬಗ್ಗೆ ಹಾಗೂ ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಣಿಕೆ ತಡೆಗಟ್ಟುವಲ್ಲಿ ವಿವಿಧ ಇಲಾಖೆಗಳ ಸಹಯೋಗ ಬಹುಮುಖ್ಯ ಎಂದು ತಿಳಿಸಿದರು.

ಪೊಲೀಸ್ ಅಧಿಕಾರಿ ರೇಣುಕಾ ಮಾತನಾಡಿ ಕಿಶೋರಿಯರು ಮಹಿಳೆಯರು ಮತ್ತು ಮಕ್ಕಳು ತೊಂದರೆ ಸಿಲುಕಿದಲ್ಲಿ ತುರ್ತು ಸಹಾಯವಾಣಿ 112 ಕ್ಕೆ ಕರೆ ಮಾಡಿದಲ್ಲಿ , ತಕ್ಷಣವೇ ಘಟನಾ ಸ್ಥಳಕ್ಕೆ ಆಗಮಿಸಿ ಸಹಾಯ ಮಾಡುವ ಭರವಸೆ ನೀಡಿದರು.

ಇದೇ ಸಂದರ್ಭದಲ್ಲಿ ಬಾಲ್ಯ ವಿವಾಹ ತಡೆ ಕುರಿತು ಜಾಥಾ ಸಹ ನಡೆಸಲಾಯಿತು. ವಲಯ ಮೇಲ್ವಿಚಾರಕಿ, ಪಾವನ ಆರ್, ಶಾಲೆ ಮುಖ್ಯೋಪಾಧ್ಯಯ ಪಾಪಯ್ಯ, ಸಾಧಿಕ್ ಹಾಗೂ ನಗರ ಸಭೆ ಸದಸ್ಯ ದೀಪಕ್ ಸೇರಿದಂತೆ ಶಾಲಾ ಸಿಬ್ಬಂದಿ, ಅಂಗನವಾಡಿ , ಆರೋಗ್ಯ , ಆಶಾ ಕಾರ್ಯಕರ್ತೆಯರು ಉಪಸ್ಥಿತರಿದ್ದರು.

## ಪೌರಕಾರ್ಮಿಕರ ಸಮಸ್ಯೆಗಳಿಗೆ ಸಕರಾತ್ಮಕ ಸ್ಪಂದನೆ: ರಘುಮೂರ್ತಿ



» **ಚಳ್ಳಕೆರೆ**

ಸಮಾಜದ ಸ್ವಚ್ಚತೆಗಾಗಿ ಸಾರ್ವಜನಿಕರ ಆರೋಗ್ಯ ರಕ್ಷಣೆಗಾಗಿ ಪ್ರತಿನಿತ್ಯವೂ ಬೀದಿಗಳಿದು ತಮ್ಮ ಪಾಲಿನ ಕರ್ತವ್ಯವನ್ನು ಪ್ರಾಮಾಣಿಕವಾಗಿ ಮಾಡುವ ಮೂಲಕ ಪೌರಕಾರ್ಮಿಕರು ಜನಸಾಮಾನ್ಯರ ವಿಶ್ವಾಸವನ್ನು ಗಳಿಸಿದ್ದಾರೆ. ದೇಶದ ಸೈನಿಕರ ಶ್ರಮದಿಂದ ದೇಶ ರಕ್ಷಣೆಯಾದರೆ, ಪೌರಕಾರ್ಮಿಕರ ಪರಿಶ್ರಮದಿಂದ ನಮ್ಮ ಆರೋಗ್ಯ ರಕ್ಷಣೆಯಾಗುತ್ತದೆ. ಪೌರಕಾರ್ಮಿಕರಿಗೆ ಜನತೆಯ ಪರವಾಗಿ ತುಂಬುಹೃದಯದ ಅಭಿನಂತೆ ಸಲ್ಲಿಸುವುದಾಗಿ ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ದಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ಸೋಮವಾರ ಸಂಜೆ ನಗರಸಭೆ ಆವರಣದಲ್ಲಿ ಪೌರಕಾರ್ಮಿಕರ ದಿನಾಚರಣೆಯನ್ನು ಜ್ಯೋತಿಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು. ಪ್ರತಿನಿತ್ಯವೂ ಸಮಾಜದ ಕಟ್ಟಕಡೆಯ ಜನರೂ ಸಹ ತೃಪ್ತಿಪಡುವಂತ ಕಾರ್ಯವನ್ನು ಪೌರಕಾರ್ಮಿಕರು ಮಾಡುತ್ತಾ ಬಂದಿದ್ದಾರೆ. ಸರ್ಕಾರದಿಂದ ಸೂಕ್ತ ಸೌಲಭ್ಯ ಸಿಗದೇ ಇದ್ದರೂ ಜನರ ಸೇವೆ ಮಾಡುವ ವಿಚಾರದಲ್ಲಿ ಅವರು ಎಂದೂ ಹಿಂದೆ ಬಿದಿದ್ದಲ್ಲ. ಹಲವಾರು ಪ್ರಮುಖ ಬೇಡಿಕೆಗಳನ್ನು ಈಡೇರಿಸುವಂತೆ ಮನವಿ ಮಾಡಿದ್ದಾರೆ. ಅವರ ಮನವಿಯಲ್ಲಿ ಕಷ್ಟಗಳ ಬಗ್ಗೆ ನಿವೇದನೆ ಮಾಡಿಕೊಂಡಿದ್ದಾರೆ, ಸರ್ಕಾರ ಈ ಬಗ್ಗೆ ಹೆಚ್ಚು ಗಮನನೀಡಿ ಪೌರಕಾರ್ಮಿಕರ ಸಮಸ್ಯೆಗಳನ್ನು ನಿವಾರಣೆ ಮಾಡಬೇಕಿದೆ. ವಿಶೇಷವಾಗಿ ಹೊರಗುತ್ತಿಗೆದಾರರ ಬದುಕಿಗೆ ಸಾಮಾಜಿಕ ಭದ್ರತೆಯನ್ನು ಒದಗಿಸಬೇಕಿದೆ, ಪೌರಕಾರ್ಮಿಕರ ಸಮಸ್ಯೆಗಳಿಗೆ ಬೆನ್ನೆಲುಬಾಗಿ ಸ್ಪಂದಿಸುವೆ ಎಂದರು.

## ಸಾಲ ಸೌಲಭ್ಯಕ್ಕೆ ಅರ್ಜಿ ಆಹ್ವಾನ

**ಚಿತ್ರದುರ್ಗ:** ಸಮಾಜ ಕಲ್ಯಾಣ ಇಲಾಖೆ ಅಧೀನದಲ್ಲಿರುವ ನಿಗಮಗಳಾದ ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ, ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದಿಂದ 2024-25ನೇ ಸಾಲಿನಲ್ಲಿ ವಿವಿಧ ಯೋಜನೆಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಅ.10 ಕೊನೆಯ ದಿನವಾಗಿದೆ. ಪರಿಶಿಷ್ಟ ಜಾತಿ ಸಮುದಾಯಗಳ ಆರ್ಥಿಕ ಅಭಿವೃದ್ಧಿಗಾಗಿ, ಸ್ವಯಂ ಉದ್ಯೋಗ ನೇರ ಸಾಲ ಯೋಜನೆ, ಉದ್ಯಮಶೀಲತಾ ಅಭಿವೃದ್ಧಿ ಯೋಜನೆ-1, ಉದ್ಯಮಶೀಲತಾ ಅಭಿವೃದ್ಧಿ ಯೋಜನೆ-2, ಉದ್ಯಮಶೀಲತಾ ಅಭಿವೃದ್ಧಿ ಸ್ವಾವಲಂಬಿ ಸಾರಥಿ ಯೋಜನೆ, ಮೈಕ್ರೋ ಕ್ರೆಡಿಟ್ (ಪ್ರೇರಣಾ) ಯೋಜನೆ, ಭೂ ಒಡೆತನ ಯೋಜನೆ ಹಾಗೂ ಗಂಗಾ ಕಲ್ಯಾಣ ಯೋಜನೆಗಳಿಗೆ ಅರ್ಜಿ ಸಲ್ಲಿಸಬಹುದು. ಈ ಯೋಜನೆಯ ಕುರಿತು ಸವಿವರವಾಗಿ ಸಮಾಜ ಕಲ್ಯಾಣ ಇಲಾಖೆಯ ಸಾಲ ಸೇವೆಗಳ ಪೋರ್ಟಲ್ ವೆಬ್‌ಸೈಟ್ https://swdcorp.karnataka.gov.in ಗೆ ಭೇಟಿ ನೀಡಿ ಮಾಹಿತಿ ಪಡೆಯಬಹುದು.

## ಪ್ರಮುಖ ಸುದ್ದಿ

# ಪ್ರಧಾನಮಂತ್ರಿ ಜನಜಾತಿಯ ಉನ್ನತ ಗ್ರಾಮ ಅಭಿಯಾನಕ್ಕೆ ಜಿಲ್ಲೆಯ 87 ಗ್ರಾಮಗಳು ಆಯ್ಕೆ: ಜಿಲ್ಲಾಧಿಕಾರಿ ಟಿ.ವೆಂಕಟೇಶ್

» **ಚಿತ್ರದುರ್ಗ**

ಪರಿಶಿಷ್ಟ ಪಂಗಡ ಜನಾಂಗದವರು ಹೆಚ್ಚಾಗಿರುವ ಜಿಲ್ಲೆಯ ಆಯ್ದ 87 ಗ್ರಾಮಗಳನ್ನು ಪ್ರಧಾನ ಮಂತ್ರಿ ಜನಜಾತಿಯ ಉನ್ನತ ಗ್ರಾಮ ಅಭಿಯಾನದಡಿ ಅಭಿವೃದ್ಧಿಪಡಿಸಲು ಆಯ್ಕೆ ಮಾಡಿದ್ದು, ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ಕ್ರಿಯಾ ಯೋಜನೆ ರೂಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ.

ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಮೀಸಲಿರಿಸಿದ ರೂ.79,156 ಕೋಟಿಗಳಲ್ಲಿ ಬುಡಕಟ್ಟು ಸಮುದಾಯಗಳು ಹೆಚ್ಚಿನ ಸಂಖ್ಯೆಯಲ್ಲಿ ವಾಸಿಸುವ ದೇಶದ 63,000 ಗ್ರಾಮಗಳನ್ನು ಅಭಿವೃದ್ಧಿ ಪಡಿಸಲು ಕ್ರಿಯಾಯೋಜನೆ ರೂಪಿಸಲಾಗಿದೆ. ಕೇಂದ್ರ ಬುಡಕಟ್ಟು ಮಂತ್ರಾಲಯ ಈ ಯೋಜನೆಗಳನ್ನು ಅನುಷ್ಠಾನಗೊಳಿಸುವ ಜವಾಬ್ದಾರಿ ಹೊತ್ತಿದೆ. ದೇಶದ ಸುಮಾರು 5 ಕೋಟಿ ಜನರಿಗೆ ಯೋಜನೆಯಿಂದ ಅನುಕೂಲವಾಗಲಿದೆ. 2024-25 ರಿಂದ 2028-29ನೇ ಸಾಲಿನ ವರೆಗೆ 5 ವರ್ಷಗಳಲ್ಲಿ ಯೋಜನೆಯನ್ನು ಪೂರ್ಣಗೊಳಿಸಲಾಗುವುದು. 2024-25 ರಿಂದ 2025-26ನೇ ಸಾಲಿಗೆ ಮೊದಲ ಹಂತದಲ್ಲಿ ರೂ.4000 ಕೋಟಿ ಅನುದಾನವನ್ನು ಪ್ರಧಾನ ಮಂತ್ರಿ ಜನಜಾತಿಯ ಉನ್ನತ ಗ್ರಾಮ ಅಭಿಯಾನದಡಿ ನಿಗದಿ ಮಾಡಲಾಗಿದೆ.

ಈ ಅಭಿಯಾನದಡಿ ಚಿತ್ರದುರ್ಗ ಜಿಲ್ಲೆಯಲ್ಲಿ ಪರಿಶಿಷ್ಟ ವರ್ಗದ ಜನಾಂಗದವರು ಹೆಚ್ಚಾಗಿರುವ 87 ಗ್ರಾಮಗಳನ್ನು ಆಯ್ಕೆ ಮಾಡಿ ಭೌತಿಕ ಗುರಿ ನಿಗಧಿ ಪಡಿಸಲಾಗಿದದ್ದು, 17 ವಿವಿಧ ಇಲಾಖೆಗಳು ಹಲವು ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಿವೆ.



ಗ್ರಾಮೀಣಾಭಿವೃದ್ಧಿ ಇಲಾಖೆಯಿಂದ ಪಕ್ಕಾ ಮನೆ, ಸಂಪರ್ಕ ರಸ್ತೆಗಳು, ಗ್ರಾಮೀಣ ನೀರು ಸರಬರಾಜು ಇಲಾಖೆಯಿಂದ ನೀರು ಸರಬರಾಜು (ಜೆಜೆಎಂ), ವಿದ್ಯುತ್ ಇಲಾಖೆಯಿಂದ ಮನೆಗಳ ವಿದ್ಯುದೀಕರಣ (ಆರ್‌ಡಿಎಸ್‌ಎಸ್), ಹೊಸ ಮತ್ತು ನವೀಕರಿಸಬಹುದಾದ ಇಂಧನ ಇಲಾಖೆಯಿಂದ ಆಫ್-ಗ್ರಿಡ್ ಸೌರ, ಹೊಸ ಸೌರ ವಿದ್ಯುತ್ ಯೋಜನೆ, ಆರೋಗ್ಯ ಇಲಾಖೆಯಿಂದ ಸಂಚಾರಿ ವೈದ್ಯಕೀಯ ಘಟಕಗಳು, ರಾಷ್ಟ್ರೀಯ ಆರೋಗ್ಯ ಮಿಷನ್, ಆಯುಷ್ಮಾನ್ ಕಾರ್ಡ್, ಪ್ರಧಾನಮಂತ್ರಿ ಜನ ಆರೋಗ್ಯ ಯೋಜನೆ, ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಇಲಾಖೆಯಿಂದ ಎಲ್‌ಪಿಜಿ ಪಿಎಂ ಉಜ್ವಲ ಯೋಜನೆಯಡಿ ಸಂಪರ್ಕಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಅಂಗನವಾಡಿ ಕೇಂದ್ರಗಳ ಅಭಿವೃದ್ಧಿ, ಪೋಷಣ್ ಅಭಿಯಾನ್, ಶಿಕ್ಷಣ ಇಲಾಖೆಯಿಂದ ವಿದ್ಯಾರ್ಥಿನಿಲಯಗಳ ನಿರ್ಮಾಣ, ಆಯುಷ್ ಇಲಾಖೆಯಿಂದ ಪೋಷಣ್ ವಾಟಿಕಾಸ್, ಟೆಲಿಕಾಂ ಇಲಾಖೆಯಿಂದ ಯುನಿವರ್ಸಲ್ ಸೇವೆ, ಕೌಶಲ್ಯಾಭಿವೃದ್ಧಿ ಇಲಾಖೆಯಿಂದ ಸ್ಕಿಲ್ ಇಂಡಿಯಾ, ಮಾಹಿತಿ ತಂತ್ರಜ್ಞಾನ ಮತ್ತು ಎಲೆಕ್ಟ್ರಾನಿಕ್ಸ್ ಇಲಾಖೆಯಿಂದ ಡಿಜಿಟಲ್ ಇನಿಶಿಯೇಟಿವ್ಸ್, ಕೃಷಿ ಇಲಾಖೆಯಿಂದ ಸುಸ್ಥಿರ ಕೃಷಿ ಉತ್ತೇಜನ, ಮೀನುಗಾರಿಕೆ ಇಲಾಖೆಯಿಂದ ಮೀನು ಸಂಸ್ಕೃತಿಯ ಬೆಂಬಲ, ಪಶುಸಂಗೋಪನೆ ಇಲಾಖೆಯಿಂದ ಜಾನುವಾರು ಪಾಲನೆ, ಪಂಚಾಯತ್ ರಾಜ್ ಇಲಾಖೆಯಿಂದ ಸಾಮರ್ಥ್ಯ ಕಟ್ಟಡ, ಪ್ರವಾಸೋದ್ಯಮ ಇಲಾಖೆಯಿಂದ ಟ್ರೈಬಲ್ ಹೋಂ ಸ್ಟೇಸ್, ಸ್ವದೇಶ್ ದರ್ಶನ, ಬುಡಕಟ್ಟು ವ್ಯವಹಾರಗಳ ಸಚಿವಾಲಯದಿಂದ ಪ್ರಧಾನಮಂತ್ರಿ ಆದಿ ಆದರ್ಶ ಗ್ರಾಮ ಯೋಜನೆ ಅನುಷ್ಠಾನಗೊಳ್ಳಲಿವೆ.

ಅಭಿಯಾನದಡಿ ಜಿಲ್ಲೆಯಲ್ಲಿ 100 ಬುಡಕಟ್ಟು ಬಹು ಉಪಯೋಗಿ ಮಾರ್ಕೆಟಿಂಗ್ ಕೇಂದ್ರಗಳು, ಆಶ್ರಮ ಶಾಲೆಗಳು, ವಿದ್ಯಾರ್ಥಿನಿಲಯಗಳು, ಸರ್ಕಾರಿ ಅಥವಾ ರಾಜ್ಯ ಬುಡಕಟ್ಟು ವಸತಿ ಶಾಲೆಗಳ ಮೂಲಭೂತ ಸೌಕರ್ಯಗಳನ್ನು ಸುಧಾರಿಸುವುದು. ಕೌನ್ಸೆಲಿಂಗ್ ಬೆಂಬಲ, ಅರಣ್ಯ ಹಕ್ಕು ಕಾಯ್ದೆ-2006 ಮತ್ತು ಸಮುದಾಯ ಅರಣ್ಯ ಹಕ್ಕು ನಿರ್ವಹಣೆ ಮಧ್ಯಸ್ಥಿಕೆಗಳಿಗೆ ಬೆಂಬಲ, ಯೋಜನಾ ನಿರ್ವಹಣಾ ನಿಧಿಗಳು ಉತ್ಪನ್ನ ಪ್ರದರ್ಶನ ನೀಡುವ ಬುಡಕಟ್ಟು ಜಿಲ್ಲೆಗಳಿಗೆ ಪ್ರೋತ್ಸಾಹ ನೀಡಲು ಅವಕಾಶ ಕಲ್ಪಿಸಲಾಗುತ್ತಿದೆ. ಈ ಯೋಜನೆಗೆ ಒಳಪಟ್ಟ 87 ಗ್ರಾಮದ ಎಲ್ಲಾ ಬುಡಕಟ್ಟು ಜನಾಂಗದವರು ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T